MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com  Yuva Marga  yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 73 | ಭಾನುವಾರ : 04-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 73 | SUNDAY : 04-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## 2026ರ ಜೂನ್ ಒಳಗಡೆ ತಂಗಭದ್ರಾ ಡ್ಯಾಮಗೆ ಹೊಸ ಕ್ರಸ್ಟ್ ಗೇಟ್ ಅಳವಡಿಸುತ್ತೇವೆ: ಸಿಎಂ

* ರೈತರಿಗೆ ಸಿಹಿ ಸುದ್ದಿ ನೀಡಿದ ಮುಖ್ಯಮಂತ್ರಿಗಳು * ಬಸ್ ಸೌಕರ್ಯ ಕಲ್ಪಿಸಿದ್ದಕ್ಕೆ ಶಾಸಕ ಬಾದರ್ಲಿ ಅವರಿಗೆ ಅಭಿನಂದನೆ * ಶ್ರೀ ಅಂಬಾಮಠದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧ:ಸಿಎಂ * ಅಂಬಾದೇವಿಯ ದರ್ಶನ ಪಡೆದಿರುವುದು ನನ್ನ ಪುಣ್ಯ:ಸಿಎಂ



ಯುವಮಾರ್ಗ ಸುದ್ದಿ

**ರಾಯಚೂರು,ಜ.3**–ಏನೇ ತೊಂದರೆಯಾದರೂ, ಎಷ್ಟೇ ಖರ್ಚಾದರು ಸಹ ತುಂಗಭದ್ರಾ ಡ್ಯಾಮಗೆ ಬರುವ ಜೂನ್ ಒಳಗಡೆ ಹೊಸ ಕ್ರಸ್ಟ್ ಗೇಟ್ ಅಳವಡಿಸಿ, ಮುಂದಿನ ಮುಂಗಾರು ಬೆಳೆಗೆ ನೀರು ಹರಿಸಿ ರೈತರಿಗೆ ನೀಡಿದ ಮಾತು ಉಳಿಸಿಕೊಳ್ಳುತ್ತೇವೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಹೇಳಿದರು.


ತಾಲೂಕಾಡಳಿತ, ತಾಲೂಕು ಪಂಚಾಯತ್ ಹಾಗೂ ಧಾರ್ಮಿಕ ದತ್ತಿ ಇಲಾಖೆಯ ಅಂಬಾದೇವಿ ವ್ಯವಸ್ಥಾಪನಾ ಸಮಿತಿಯ ಆಶ್ರಯದಲ್ಲಿ ಸಿಂಧನೂರ ತಾಲೂಕಿನ ಅಂಬಾಮಠದ ಆವರಣದಲ್ಲಿ ಜನವರಿ 3ರಂದು ನಡೆದ ಅಂಬಾದೇವಿ ಮಹಾರಥೋತ್ಸವ ಮತ್ತು ಜಂಬೂ ಸವಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ ಮುಖ್ಯಮಂತ್ರಿಗಳು, 431 ಕೋಟಿ ರೂ ವೆಚ್ಚದಲ್ಲಿ ಪಾಪಯ್ಯ ಟನೇಲ್ ಕಾರ್ಯ ಮತ್ತು 33 ಗೇಟ್ ಅಳವಡಿಸುವ ಕಾರ್ಯ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಸಿಂಧನೂರ ಕ್ಷೇತ್ರದ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ನೀಡಿದ ಅನುದಾನವನ್ನು ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಸದ್ಬಳಕೆ ಮಾಡುತ್ತಿರುವುದು ಸಂತಷದ ಸಂಗತಿಯಾಗಿದೆ. ಸಿಂಧನೂರ ಕ್ಷೇತ್ರದ ಕುಡಿಯುವ ನೀರಿನ ಕೆರೆಗಳ ನಿರ್ಮಾಣ ಅಭಿವೃದ್ಧಿಗೆ 13.42 ಕೋಟಿ ರೂ., ಸಾಲಗುಂದ ಏತ ನೀರಾವರಿ ಯೋಜನೆಗೆ 71 ಕೋಟಿ ರೂ., ಒಳಬಳ್ಳಾರಿ ಏತ ನೀರಾವರಿ ಯೋಜನೆಗೆ 43.10 ಕೋಟಿ ರೂ., ಮುಳ್ಳೂರ ಗ್ರಾಮದ ಹತ್ತಿರ ಬ್ರಿಜ್ ಕಂ ಬ್ಯಾರೇಜ್ ಯೋಜನೆಗೆ 29 ಕೋಟಿ ರೂ ವೆಚ್ಚ ಮಾಡಿ ಈ ಭಾಗದ ಅನ್ನದಾತರಿಗೆ ಅನುಕೂಲ ಕಲ್ಪಿಸುತ್ತಿದ್ದೇವೆ ಎಂದು ತಿಳಿಸಿದರು.

42 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರು ಹರಿಸುವ ಪ್ರಯತ್ನದಲ್ಲಿ ಈಗಾಗಲೇ 30 ಲಕ್ಷ ಪ್ರದೇಶಕ್ಕೆ ನೀರು ಕೊಟ್ಟಿದ್ದೇವೆ. ಉಳಿದ 12 ಲಕ್ಷ ಹೆಕ್ಟೇರ ಪ್ರದೇಶಕ್ಕೆ ಸಹ ನೀರು ಹರಿಸುವ ಕಾರ್ಯ ನಡೆಯುತ್ತಿದೆ ಎಂದರು.

ರಾಜ್ಯ ಸರ್ಕಾರದ ಖಜಾನೆಯಲ್ಲಿ ಹಣ ಇಲ್ಲ ಎನ್ನುವುದು ಅಪ್ಪಟ ಸುಳ್ಳು. ನಾವು ಹಿಂದೆ ಬಿದ್ದಿಲ್ಲ. ಅಭಿವೃದ್ಧಿ ಕಾರ್ಯಗಳು ಹಾಗೂ ಗ್ಯಾರಂಟಿ ಯೋಜನೆಗಳ (2ನೇ ಪುಟಕ್ಕೆ>>>)



### ರಾಜ್ಯದಲ್ಲೇ ಹೊಸ ಇತಿಹಾಸ ಬರೆದ ಸಿಂಧನೂರು ಕ್ಷೇತ್ರದ ಶಾಸಕರು

## ಶಾಲಾ–ಕಾಲೇಜು ವಿದ್ಯಾರ್ಥಿಗಳಿಗಾಗಿಯೇ 14 ವಿನೂತನ ಬಸ್ಸಗಳಿಗೆ ಸಿಎಂ ಸಮ್ಮುಖದಲ್ಲಿ ಚಾಲನೆ




ಯುವಮಾರ್ಗ ಸುದ್ದಿ

**ಸಿಂದನೂರು,ಜ.3** ರಾಜ್ಯದಲ್ಲೇ ಸಿಂಧನೂರು ತಾಲೂಕಿನ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಹೊಸ ಇತಿಹಾಸ ನಿರ್ಮಿಸಿದ್ದಾರೆ. ಶಾಸಕರ ವಿಶೇಷ ಪ್ರಯತ್ನದಿಂದಾಗಿ ಇನ್ಮುಂದೆ ಶಾಲಾ ಕಾಲೇಜುಗಳಿಗೆ ವಿದ್ಯಾರ್ಥಿಗಳು ಬಂದು ಹೋಗಲು ಅನುಕೂಲವಾಗುವಂತೆ ಸಿಂಧನೂರ ತಾಲೂಕಿನ ಪ್ರತಿ ಹಳ್ಳಿಹಳ್ಳಿಗಳ ರಸ್ತೆಗಳಿಗೆ ಹೊಸ 14 ಬಸ್ಸಗಳು ಇಳಿಯಲಿವೆ.

ರಾಯಚೂರು ಜಿಲ್ಲೆಯಲ್ಲಿಯೇ ಸಿಂಧನೂರ ತಾಲೂಕಿನಲ್ಲಿ ದಾಖಲೆಯ ಈ ಬಸ್ ಸೌಕರ್ಯಕ್ಕೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ ಅವರು ಜನವರಿ 3ರಂದು ಅಂಬಾಮಠದ ಅವರಣದಲ್ಲಿ ವಿದ್ಯುಕ್ತ ಚಾಲನೆ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ 5 ಕೋಟಿ ರೂ ಅನುದಾನದಲ್ಲಿ ತಿಳಿ ಹಸಿರು ಬಳಿ ಮಿಶ್ರಿತ 10 ಬಸ್ಸಗಳಿಗೆ ಸಾಂಕೇತಿಕವಾಗಿ ಹಸಿರು ನಿಶಾನೆ ತೋರಿದರು.

ಬಸ್ ಗಳಿಗೆ ಅಲಂಕಾರ: ಉದ್ಘಾಟನೆ ಹಿನ್ನೆಲೆಯಲ್ಲಿ ಅಂಬಾಮಠದ ಅಂಗಳದಲ್ಲಿ ನಿಲುಗಡೆಯಾಗಿದ್ದ ಎಲ್ಲ ಬಸಗಳಿಗೆ ಬಲೂನ್ ಕಟ್ಟಿ ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು.

ಈ ಸಂದರ್ಭದಲ್ಲಿ ಸಿಂಧನೂರ ಶಾಸಕರಾದ ಹಂಪನಗೌಡ ಬಾದರ್ಲಿ ಸೇರಿದಂತೆ, ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಶಿವರಾಜ ತಂಗಡಗಿ, ಸತೀಶ ಜಾರಕಿಹೊಳಿ, ಸಂಸದರಾದ ರಾಜಶೇಖರ ಹಿಟ್ನಾಳ, ಶಾಸಕರಾದ ಬಸನಗೌಡ ದದ್ದಲ್, ಬಸನಗೌಡ ತುರವಿಹಾಳ, ಬಿಎಂ ನಾಗರಾಜ, ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಬಸನಗೌಡ ಬಾದರ್ಲಿ, ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಂ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಎಸ್ಪಿ ಅರುಣಾಂಕ್ಷು ಗಿರಿ, ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಬಿ ಸುಶೀಲಾ, ಮುಖ್ಯ ತಾಂತ್ರಿಕ ಶಿಲ್ಪಿಗಳಾದ ಸಂತೋಷಕುಮಾರ, ವಿಭಾಗೀಯ ನಿಯಂತ್ರಾಧಿಕಾರಿ ಚಂದ್ರಶೇಖರ, ವಿಭಾಗೀಯ ತಾಂತ್ರಿಕ ಶಿಲ್ಪಿಗಳಾದ ನಾಗರಾಜ ವಾರದ ಹಾಗೂ ಇನ್ನಿತರರು ಇದ್ದರು.

### ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ

## ಖಾಲಿ ಇರುವ ಶಿಕ್ಷಕರ ಹುದ್ದೆ ಭರ್ತಿಗೆ ಶಶಿಲ್ ನಮೋಶಿ ಒತ್ತಾಯ



ಯುವಮಾರ್ಗ ಸುದ್ದಿ

**ಲಿಂಗಸುಗೂರು,ಜ.3**– ಶಿಕ್ಷಣ ಕ್ಷೇತ್ರದಲ್ಲಿ ಕಲ್ಯಾಣ ಕರ್ನಾಟಕ ಭಾಗ ಹಿಂದುಳಿಯಲು ಶಿಕ್ಷಕರ ಕೊರತೆ ಕಾರಣವಾಗಿದೆ. ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಬೇಕೆಂದು ವಿಧಾನ ಪರಿಷತ್ ಸದಸ್ಯ ಶಶಿಲ್ ಜಿ.ನಮೋಶಿ ಸರ್ಕಾರಕ್ಕೆ ಒತ್ತಾಯಿಸಿದರು.

ಪಟ್ಟಣದ ಪದವಿ ಪೂರ್ವ ಪ್ರೌಢ ಶಾಲಾ ವಿಭಾಗದಲ್ಲಿ ತಾಲೂಕು ಆಡಳಿತ ಕ್ಷೇತ್ರಶಿಕ್ಷಣ ಕಾರ್ಯಾಲಯ ಲಿಂಗಸುಗೂರು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣ ಕ್ಷೇತ್ರದಲ್ಲಿ ಕಲ್ಯಾಣ ಕರ್ನಾಟಕ ಮುಂದೆ ಬರಬೇಕಾದರೆ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಬೇಕೆಂದರು.

ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ವಿವಿಧ ಕೌಶಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ಶಾಸಕ ಮಾನಪ್ಪ ವಜ್ಜಲ್ ಮಾತನಾಡಿ ಪಠ್ಯದ ಜೊತೆ ಪಠೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದು ಅಷ್ಟೆ ಮುಖ್ಯ ಅಂದಾಗ ಸಾಧನೆ ಮಾಡಲು ಸಾಧ್ಯ.ನಮ್ಮ (2ನೇ ಪುಟಕ್ಕೆ>>>)

### ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಳ ಕುರಿತು ಕ್ರೈಸ್ ಶಾಲೆ ಮತ್ತು ವಸತಿ ನಿಲಯ ಮೇಲ್ವಿಚಾರಕರೊಂದಿಗೆ ತಹಸೀಲ್ದಾರ್ ಸಭೆ

## ಎಸ್‌ಎಸ್‌ಎಲ್‌ಸಿ ಶೇ.100%ರಷ್ಟು ಫಲಿತಾಂಶ ಸಾಧನೆಗೆ ಎಲ್ಲಾರೂ ಶ್ರಮಿಸಬೇಕಿದೆ: ಭೀಮರಾಯ ರಾಮಸಮುದ್ರ

ಯುವಮಾರ್ಗ ಸುದ್ದಿ

**ಮಾನ್ವಿ,ಜ.3**– ಅಖಂಡ ಮಾನ್ವಿ ತಾಲೂಕಿನ ಕ್ರೈಸ್ ವಸತಿ ಶಾಲೆಗಳ ಮತ್ತು ವಿವಿಧ ಇಲಾಖೆಗಳ ವಸತಿ ನಿಲಯಗಳಲ್ಲಿ ಅಭ್ಯಾಸ ಮಾಡುತ್ತಿರು ಎಸ್‌ಎಸ್‌ಎಲ್‌ಸ್ಸಿ ವಿದ್ಯಾರ್ಥಿಗಳ ಶೇ.100ರಷ್ಟು ಫಲಿತಾಂಶ ಸಾಧನೆಗೆ ಮಾನ್ವಿ ಮತ್ತು ಸಿರವಾರ ತಾಲೂಕಿನ ಎಲ್ಲಾ ವಸತಿ ಶಾಲೆಗಳ ಪ್ರಾಂಶುಪಾಲರು ಮತ್ತು ವಿವಿಧ ಇಲಾಖೆಗಳ ವಸತಿ ನಿಲಯ ಮೇಲ್ವಿಚಾರಕರು ವಿಶೇಷ ಅಗತ್ಯ ಕಾಳಜಿಯೊಂದಿಗೆ ಶ್ರಮಿಸ 'ಬೇಕಿದೆ ಎಂದು ತಹಸೀಲ್ದಾರ್ ಭೀಮರಾಯ ರಾಮ ಸಮುದ್ರ ಸಭೆಯಲ್ಲಿ ಹೇಳಿದರು.

ಇಂದು ತಹಸೀಲ್ದಾರ್ ಕಛೇರಿಯ ಸಭಾಂಗಣದಲ್ಲಿ ತಹಸೀಲ್ದಾರ್ ಅಧ್ಯಕ್ಷತೆಯಲ್ಲಿ ನಡೆದ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ವಸತಿ ಶಾಲೆಯ ಪ್ರಾಂಶುಪಾಲರ ಮತ್ತು ವಿವಿಧ ಇಲಾಖೆಗಳ ವಸತಿ ನಿಲಯ ಮೇಲ್ವಿಚಾರಕರ ಸಭೆಯನ್ನು ಉದ್ದೇಶಿಸಿ ಮಾತ ನಾಡಿದ ಅವರು, ಕಳೆದ ಬಾರಿಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸಾಧನೆಯಲ್ಲಿ ಅಖಂಡ ಮಾನ್ವಿ ತಾಲೂಕಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಕೆಳಮಟ್ಟದಲ್ಲಿದೆ. ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶಗಳ ಸುಧಾರಣೆಗಾಗಿ ಶಿಕ್ಷಣಾ ಇಲಾಖೆ 29 ಅಂಶಗಳ ಕಾರ್ಯಕ್ರಮಗಳ ಜೊತೆಗೆ ಶಾಲೆ ಅವಧಿಯಲ್ಲಿ ಪ್ರತಿದಿನ ಬೆಳಿಗ್ಗೆ ಸಂಜೆ ವಿಷಯವಾರು ವಿಶೇಷ ತರಗತಿಗಳ ಆಯೋಜನೆ, ಮನೆ ಭೇಟಿ, ಪಾಲಕರ ಸಭೆ, ವೇಕಪ್ ಕಾಲ್ ಸೇರಿದಂತೆ ಕಲಿಕೆಯಲ್ಲಿ ಹಿಂದುಳಿದ ಸಿ ಮತ್ತು ಸಿ+ ಮಕ್ಕಳ ಫಲಿತಾಂಶ ಸಾಧನೆಗಾಗಿ 40+ ವಿಜನ್ ಫಲಿತಾಂಶ ಸುಧಾರಣಾ ಕ್ರಮಗಳನ್ನು ಇಲಾಖೆ ಕೈಗೊಂಡಿದೆ. ಈಗಾಗಲೇ ಎಲ್ಲಾ ಶಾಲೆಗಳಲ್ಲಿ ಫಲಿತಾಂಶ ಹೆಚ್ಚಾಳಕ್ಕಾಗಿ ಈ ಎಲ್ಲಾ ಕ್ರಮಗಳು ಅನುಷ್ಠಾನದಲ್ಲಿದೆ. ಅಖಂಡ ತಾಲೂಕಿನ ಎಸ್‌ಎಸ್‌ಎಲ್‌ಸಿ ಶೇ.100ರಷ್ಟು ಫಲಿತಾಂಶ ಸಾಧನೆಗೆ ಕ್ರೈಸ್ ವಸತಿ ಶಾಲೆಗಳ ಮತ್ತು ವಿವಿಧ ಇಲಾಖೆಗಳ ವಸತಿ ನಿಲಯಗಳ ಫಲಿತಾಂಶವು ಈ ಬಾರಿ ಶೇ.100ರಷ್ಟು ಫಲಿತಾಂಶ ಸಾಧನೆಯ ಗುರಿ ಹೊಂದಬೇಕಿದೆ. ಈ ನಿಟ್ಟಿನಲ್ಲಿ ಎಸ್‌ಎಸ್‌ಎಲ್‌ಸಿಮಕ್ಕಳ ಅಭ್ಯಾಸದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಫಲಿತಾಂಶ ಹಚ್ಚಳಕ್ಕೆ ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ. ವಸತಿ ನಿಲಯದಲ್ಲಿ ಟ್ಯೂಷನ್ ವ್ಯವಸ್ಥೆ, ವಿಶೇಷವಾಗಿ ಬೆಳಿಗ್ಗೆ ಮಕ್ಕಳ ಅಭ್ಯಾಸದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವದು, ಸಿ ಮತ್ತು ಸಿ+ ವಿದ್ಯಾರ್ಥಿಗಳಿಗೆ 40+ ವಿಜನ್, ವಿಷಯವಾರು ಸಂಪನ್ಮೂಲ ವ್ಯಕ್ತಿಗಳಿಂದ ಬೋಧನೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು.

ನಂತರ ಅಖಂಡ ತಾಲೂಕಿನ ಹನ್ನೊಂದ ಕ್ರೈಸ್ ವಸತಿ ಶಾಲೆಗಳ ಹಾಗೂ ವಿವಿಧ ಇಲಾಖೆಗಳ ವಸತಿ ನಿಲಯದ ಎಸ್‌ಎಸ್‌ಎಲ್‌ಸಿವಿದ್ಯಾರ್ಥಿಗಳ ಎಫ್‌ಎ–1,2,3 ಮತ್ತು ಎಫ್‌ಎ–1 ಕಿರಿ ಪರೀಕ್ಷೆಗಳ ಫಲಿತಾಂಶ ಮಾಹಿತಿಯನ್ನು ಪಡೆದುಕೊಂಡರು. ನಂತರ ಸಭೆಯಲ್ಲಿ ಉಪಸ್ಥಿತರಿದ್ದ ಸಿರವಾರ ತಾಲೂಕ ತಹಸೀಲ್ದಾರ್ ಅರೋಸ ಪವಾರ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ ಅವರು ವಸತಿಶಾಲೆಗಳ ಪ್ರಿನ್ಸಿಪಲ್ ಮತ್ತು ನಿಲಯ ಪಾಲಕರಿಗೆ ಫಲಿತಾಂಶ ಸುಧಾರಣೆ ಕುರಿತು ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.




ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಭಾಗಯ್ಯ,ತಾಲೂಕ ನೋಡಲ್ ಅಧಿಕಾರಿ ಹನುಮೇಶ ನಾಯಕ, ಇಸಿಓ ಮಹೇಶ, ಸಿಆರ್ಪಿ ಹಾಲೇಶ್ ಹಾಗೂ ಕ್ರೈಸ್ ಶಾಲೆಗಳ ಪ್ರಿನ್ಸಿಪಲ್ಸ್, ವಸತಿ ನಿಲಯ ಮೇಲ್ವಿಚಾರಕರು ಭಾಗವಹಿಸಿದ್ದರು.

## ಮೊದಲನೇಯ ಪುಟದಿಂದ

# 2026ರ ಜೂನ್ ಒಳಗಡೆ ತಂಗಭದ್ರಾ ಡ್ಯಾಮಗೆ ಹೊಸ ಕ್ರಸ್ಟ್ ಗೇಟ್ ಅಳವಡಿಸುತ್ತೇವೆ: ಸಿಎಂ

ಅನುಷ್ಠಾನ ಕಾರ್ಯ ಎರಡೂ ನಡೆಯುತ್ತಿವೆ. ಅನ್ನಭಾಗ್ಯ, ಗೃಹ ಲಕ್ಷ್ಮಿ, ಗೃಹ ಜ್ಯೋತಿ, ಶಕ್ತಿ, ಯುವನಿಧಿ ಪಂಚ ಗ್ಯಾರಂಟಿ ಯೋಜನೆಗಳಿಗೆ ಇದುವರೆಗೆ ರಾಜ್ಯ ಸರ್ಕಾರವು 1,12,000 ಕೋಟಿ ರೂ ಖರ್ಚು ಮಾಡಿದ್ದೇವೆ. ಪ್ರಸಕ್ತ 2026ನೇ ಸಾಲಿನಲ್ಲೂ ಸಹ ಮತ್ತೆ 52 ಸಾವಿರ ಕೋಟಿ ರೂ ಖರ್ಚು ಮಾಡುತ್ತಿದ್ದೇವೆ. ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ ಬಳಿಕ ತಲಾ ಆದಾಯದಲ್ಲಿ ಕರ್ನಾಟಕ ರಾಜ್ಯವು ಇಡಿ ದೇಶದಲ್ಲೇ ನಂಬರ್ 1 ಸ್ಥಾನದಲ್ಲಿದೆ. ನಾವು ನುಡಿದಂತೆ ನಡೆಯುತ್ತೇವೆ. ಹೇಳಿದಂತೆ ಕೆಲಸ ಮಾಡತ್ತೇವೆ. ರಾಯಚೂರು ಜಿಲ್ಲೆಯಲ್ಲಿ ಕೊನೆಯ ಭಾಗದ ರೈತರಿಗೆ ನೀರು ಕೊಡಲು ನಾವು ಬದ್ಧರಾಗಿದ್ದೇವೆ ಎಂದು ತಿಳಿಸಿದರು.

ರಾಜಸ್ಥಾನ ರಾಜ್ಯ ಬಿಟ್ಟರೆ ಕರ್ನಾಟಕ ರಾಜ್ಯವು ಹೆಚ್ಚು ಒಣಭೂಮಿ ಇರುವ ಎರಡನೇ ರಾಜ್ಯವಾಗಿದೆ. ಇದು ನಮ್ಮ ಗಮನಕ್ಕಿದೆ. ಈ ಕಾರಣದಿಂದಾಗಿ ಸಿಂಧನೂರ, ರಾಯಚೂರು ಸೇರಿದಂತೆ ಎಲ್ಲಾ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಒತ್ತು ನೀಡಿ ನೀರಾವರಿ ಪ್ರದೇಶದ ವಿಸ್ತೀರ್ಣಕ್ಕೆ, ಹಸೀರಿಕರಣಕ್ಕೆ ಒತ್ತು ಕೊಡುವ ಉದ್ದೇಶ ಹೊಂದಿದ್ದೇವೆ ಹೊಂದಿದ್ದೇವೆ ಎಂದರು.

ಕೃಷ್ಣ ಮೇಲ್ದಂಡೆ ಮೂರನೇ ಹಂತದ ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಸರ್ಕಾರವು ಇದುವರೆಗೆ ಗೆಜೆಟ್ ನೋಟಿಫಿಕೇಶನ್ ಮಾಡುತ್ತಿಲ್ಲ. 172 ಟಿಎಂಸಿ ನೀರು ಬಳಸಿಕೊಳ್ಳಲು ಯಾವುದೇ ಅಭ್ಯಂತರ ಇಲ್ಲ ಎಂಬುದಾಗಿ

2013ರಲ್ಲಿಯೇ ನ್ಯಾಯ ನಮ್ಮ ಪರವಾಗಿದೆ ಎಂದು ತಿಳಿಸಿದರು.

ಬಾಕಿ ಅನುದಾನ ಬಿಡುಗಡೆ: ಶ್ರೀ ಸೋಮಲಾಪುರದ ಅಂಬಾಮಠದ ದೇವಸ್ಥಾನಕ್ಕೆ ನಿಗದಿಪಡಿಸಿದ 6.30 ಕೋಟಿ ರೂ ಪೈಕಿ ಇದುವರೆಗೆ 2 ಕೋಟಿ ರೂ ವೆಚ್ಚ ಮಾಡಲಾಗಿದೆ. ಬಾಕಿ ಅನುದಾನವನ್ನು ಸಹ ಬಿಡುಗಡೆ ಮಾಡಿ ಅಂಬಾಮಠದ ಸಮಗ್ರ ಅಭಿವೃದ್ಧಿಗೆ ನಾವು ಬದ್ದರಾಗಿದ್ದೇವೆ ಎಂದು ತಿಳಿಸಿದರು.

ಮಹಾತ್ಮ ಗಾಂಧೀಜಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸ್ವರೂಪವನ್ನು ಕೇಂದ್ರ ಸರ್ಕಾರವು ಸಂಪೂರ್ಣ ಬದಲಿಸಿ, ಜನ ಸಾಮಾನ್ಯರಿಗೆ ಅನ್ಯಾಯ ಮಾಡುತ್ತಿದೆ ಎಂದು ಮುಖ್ಯಮಂತ್ರಿಗಳು ಅಸಮಧಾನ ವ್ಯಕ್ತಪಡಿಸಿದರು.

ಶಾಸಕರಿಗೆ ಅಭಿನಂದನೆ: ಸಿಂಧನೂರು ತಾಲೂಕಿನ ಸಮಸ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಯೋಚಿಸಿ, ಕೆಕೆಆರ್ ಡಿಬಿಯಿಂದ 14 ಬಸ್ ಗಳ ಸೌಕರ್ಯ ಕಲ್ಪಿಸುವಲ್ಲಿ ಶ್ರಮಿಸಿದ ಸಿಂಧನೂರ ಶಾಸಕರಾದ ಹಂಪನಗೌಡ ಬಾದರ್ಲಿ ಅವರಿಗೆ ವಿದ್ಯಾರ್ಥಿಗಳ ಪರವಾಗಿ ಅಭಿನಂದನೆ ತಿಳಿಸುತ್ತೇನೆ ಎಂದು ಮುಖ್ಯಮಂತ್ರಿಗಳು ಸಂತಷ ವ್ಯಕ್ತಪಡಿಸಿದರು.

### ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ

# ಖಾಲಿ ಇರುವ ಶಿಕ್ಷಕರ ಹುದ್ದೆ ಭರ್ತಿಗೆ ಶಶಿಲ್ ನಮೋಶಿ ಒತ್ತಾಯ

ಭಾಗದಲ್ಲಿ 19 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಅತಿಥಿ ಶಿಕ್ಷಕರಿಂದ ಶಾಲೆಗಳನ್ನು ನಡೆಸಲಾಗುತ್ತದೆ. ಶಿಕ್ಷಣ ಕ್ಷೇತ್ರದಲ್ಲಿ ನಮ್ಮ ಭಾಗದ ವಿದ್ಯಾರ್ಥಿಗಳು ಹೇಗೆ ಮುಂದೆ ಬರಲು ಸಾಧ್ಯ. ಕೂಡಲೇ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಬೇಕೆಂದರು.

ವಿದ್ಯಾರ್ಥಿಗಳಲ್ಲಿರುವ ಸೃಜನಶೀಲತೆ, ಕಲಾ ಪ್ರತಿಭೆ ಮತ್ತು ಸಾಂಸ್ಕೃತಿಕ ಅರಿವು ಸಮಾಜದ ಭವಿಷ್ಯವನ್ನು ರೂಪಿಸುವ ಶಕ್ತಿಯಾಗಿದೆ. ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವದಂತಹ ವೇದಿಕೆಗಳು ಮಕ್ಕಳ ಆತ್ಮವಿಶ್ವಾಸವನ್ನು ಹೆಚ್ಚಿಸಿ, ಅವರ ಅಡಗಿರುವ ಪ್ರತಿಭೆಯನ್ನು ಹೊರತರುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ಈ ಸಂದರ್ಭದಲ್ಲಿ ಕು.ಸತ್ಯಮ್ಮ ತಹಶೀಲ್ದಾರ, ಸುಜಾತ ಹೂನೂರು ಕ್ಷೇತ್ರ ಶಿಕ್ಷಣಾಧಿಕಾರಿಗಳು, ನೌಕರಕ ಸಂಘದ ಜಿಲ್ಲಾಧ್ಯಕ್ಷ ಕೃಷ್ಣಾಪ್ಪ, ಬಸವರಾಜ ಕರಡಿ, ಬಸವರಾಜ ಹಂದ್ರಾಳ, ಶರಣಗೌಡ ಅಗಸಿ ಮುಂದಿನ, ಸಂಗಯ್ಯ ಗಣಾಚಾರಿ, ಜಮದಗ್ನಿ ಸೇರಿ ತಾಲೂಕಿನ ವಿವಿಧ ಶಾಲಾ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ತಿರುಪತಿ ಎಲಿಗಾರ ರಸ್ತೆಯಲ್ಲಿ ಕೊಳಚೆ ನೀರು :ರೋಗ ಭೀತಿಯಲ್ಲಿ ಜನ

ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಲ್ಲಿ ಇಚ್ಚಾಶಕ್ತಿ ಕೊರತೆಯಿಂದ ನಿತ್ಯ ,ನಿರಂತರವಾಗಿ ತೊಂದರೆ ಎದುರಿಸುವಂತಾಗಿದೆ ಎಂದು ಜನತೆ ದೂರುತ್ತಾರೆ.

ಪ್ರತಿ ಮನೆಯವರು ಕೊಳಚೆ ನೀರನ್ನು ಬೀದಿಗೆ ಬೀಡುವುದರಿಂದ,ಚರಂಡಿ ಇಲ್ಲದಿರುವುದರಿಂದ,ವಾಹನಗಳ ಓಡಾಟ,ರಸ್ತೆ ಇಳಿಜಾರಿನಲ್ಲಿ ಇರುವುದರಿಂದ ಕೊಳಚೆ ನೀರು ಅಲ್ಲಲ್ಲಿ ಸಂಗ್ರವಾಗುತ್ತಿದೆ.ಕೊಳಚೆಯನ್ನೇ ತುಳಿದುಕೊಂಡು ತಿರುಗಾಡಬೇಕು.ಇನ್ನು ವಾಹನಗಳು ಸಂಚರಿಸಿದರೆ ಕೊಳಚೆ ನೀರು ಮನೆಗಳಿಗೆ ರಾಚುತ್ತದೆ.

ರಸ್ತೆಯಲ್ಲಿ ಕೊಳಚೆ ನೀರು ಸಂಗ್ರಹವಾಗುವ ಕಾರಣ ಕೆಟ್ಟ ವಾಸನೆ ಜತೆಗೆ ಸೊಳ್ಳೆಗಳ ಕಾಟ ಹೆಚ್ಚಿದೆ.ಇದರಿಂದ ಆರೋಗ್ಯ ಮೇಲೆ ದುಷ್ಪರಿಣಾಮ ಆಗುವುದು ಸಾಮನ್ಯ.

ನಿತ್ಯ ಮನಸ್ತಾಪ: ಎದುರು ಅಥವಾ ಪಕ್ಕದ ಮನೆಯವರು ಬಟ್ಟೆ ಒಗೆದ,ಸ್ನಾನ,ನಿತ್ಯ ಬಳಕೆಗೆ ಬಳಸಿದ ನೀರು ಮುಂದೆ ಹರಿಯದೇ ಒಂದೆ ಸ್ಥಳದಲ್ಲಿ ವರ್ಷಾನುಗಟ್ಟಲೆ ನಿಲ್ಲುತ್ತಿದೆ.ನೀರು ಹರಿದು ಹೋಗಲು ದಾರಿ ಮಾಡಿಲ್ಲ.ನೀರಿನಲ್ಲಿ ಗಿಡಗಂಟಿ,ಹುಲ್ಲು ಬೆಳೆದು ತೊಂದರೆ ಕೊಡುತ್ತಿದೆ.ಇದರಿಂದ ನೆರೆ ಹೊರೆಯುವರೊಂದಿಗೆ ಜಗಳ ಸಾಮನ್ಯವಾಗಿದೆ.ಈ ಗ್ರಾಮದ ಬಹುತೇಕ ಭಾಗದಲ್ಲಿ ಚರಂಡಿಗಳಿಲ್ಲದೆ ತ್ಯಾಜ್ಯ ನೀರು ನಿಂತು ಸೊಳ್ಳೆ ಉತ್ಪತ್ತಿ ಕೇಂದ್ರಬಾಗುತ್ತಿದೆ.ಸಾಂಕ್ರಮಿಕ ರೋಗಗಳು ಹರಡುವ ಭೀತಿಯಲ್ಲಿಯೇ ಜನರು ಜೀವನ ನಡೆಸುತ್ತಿದ್ದಾರೆ.

ಇಷ್ಟೆಲ್ಲ ಸಮಸ್ಯೆಗಳಿದ್ದರೂ ಗ್ರಾಮದಲ್ಲಿ ಪೂರ್ಣ ಪ್ರಮಾಣದಲ್ಲಿ ವ್ಯವಸ್ಥಿತ ರೀತಿಯಲ್ಲಿ ಚರಂಡಿ ,ಕಾಂಕ್ರೀಟ್ ರಸ್ತೆ ನಿರ್ಮಿಸಬೇಕು ಎಂಬ ಬೇಡಿಕೆ ಈಡೇರಿಲ್ಲ.ಇನ್ನಾದರೂ ಸಂಬಂಧಪಟ್ಟವರು ಈ ಬಗ್ಗೆ ಗಮನ ಹರಿಸಬೇಕಿದೆ.

# ಲೊಯೋಲಾ ಸಾಮಾಜ ಸೇವಾ ಕ್ಲಬ್ ನಿಂದ ತಾಯಿ ಎದೆ ಹಾಲು ಉಣಿಸುವ ಕೊಠಡಿ ಪ್ರಾರಂಭ

ಯುವಮಾರ್ಗ ಸುದ್ದಿ

**ಮಾನ್ವಿ,ಜ.3–** ಪಟ್ಟಣದ ಕಲ್ಯಾಣ ರ್‍ನಾಟಕ ರಸ್ತೆ ಸಾರಿಗೆ ಬಸ್ ನಿಲ್ದಾಣದ ಆವರಣದಲ್ಲಿ ಲೊಯೋಲಾ ಸಾಮಾಜ ಸೇವಾ ಕ್ಲಬ್ ವತಿಯಿಂದ ಅಭಿವೃದ್ಧಿ ಪಡಿಸಿದ ತಾಯಿ ಎದೆ ಹಾಲು ಉಣಿಸುವ ಕೊಠಡಿಯನ್ನು ಮಾನ್ವಿ ಸಾರಿಗೆ ಘಟಕದ ವ್ಯವಸ್ಥಾಪಕರಾದ ಎಂ. ನಾಗರಾಜ್ ಉದ್ಘಾಟಿಸಿ ಮಾತನಾಡಿ ಮಾನ್ವಿ ಪಟ್ಟಣದಲ್ಲಿ ನಿತ್ಯ ಸಾವಿರಾರು ಜನ ಮಹಿಳೆಯರು ಪ್ರಾಯಾಣಿಸುತ್ತಾರೆ ಅವರಲ್ಲಿ ಶಿಶುವಿನ ತಾಯಂದಿರಿಗೆ ಬಸ್ ನಿಲ್ದಾಣದ ಆವರಣದಲ್ಲಿ ಶಿಶು ಎದೆ ಹಾಲು ಉಣಿಸಲು ಒಂದು ಕೊಠಡಿಯ ವ್ಯವಸ್ಥೆ ಮಾಡಲಾಗಿತ್ತು ನಂತರದಲ್ಲಿ ಲೊಯೋಲಾ ಸಾಮಾಜ ಸೇವಾ ಕ್ಲಬ್ ಮೂಲಕ ಶಾಲೆಯ ವಿದ್ಯರ್ಥಿಗಳು ದೇಣಿಗೆ ಮೂಲಕ ಸಂಗ್ರಹಿಸಿದ ಹಣದಲ್ಲಿ ಮತ್ತಷ್ಟು ಸೌಲಭ್ಯಗಳನ್ನು ಕಲ್ಪಿಸಿರುವುದರಿಂದ ತಾಯಂದಿರಿಗೆ ತಮ್ಮ ಶಿಶುಗಳಿಗೆ ಹಾಲುಣಿಸುವುದಕ್ಕೆ ತುಂಬ ಆನುಕೂಲವಾಗಿದೆ ಎಂದು ತಿಳಿಸಿದರು.

ಲೊಯೋಲಾ ಶಾಲೆಯ ನರ್ದೇಶಕರಾದ ಫಾ. ಸಿರಿಲ್ ರಾಜ್ ಎಸ್.ಜೆ. ಮಾತನಾಡಿ ಶಾಲೆಯ ಮಕ್ಕಳಲ್ಲಿ ಸಾಮಾಜಿಕ ಜವಾಬ್ದಾರಿಯನ್ನು ಹೆಚ್ಚಿಸುವುದಕ್ಕಾಗಿ ಲೊಯೋಲಾ ಸಾಮಾಜ ಸೇವಾ ಕ್ಲಬ್ ವತಿಯಿಂದ ಶಾಲೆಯ ವಿದ್ಯರ್ಥಿಗಳಿಂದ ಸಂಗ್ರಹಿಸಿದ ದೇಣಿಗೆಯ ಮೂಲಕ ಮಾನ್ವಿ ಬಸ್ ನಿಲ್ದಾಣದಲ್ಲಿ ತಾಯಿ ಎದೆ ಹಾಲು ಉಣಿಸುವ ಕೊಠಡಿಯನ್ನು ಅಭಿವೃದ್ಧಿ ಪಡಿಸಲಾಗಿದೆ ಎಂದು ತಿಳಿಸಿದರು.



ಕರ್‍ಯಕ್ರಮದಲ್ಲಿ ಲೊಯೋಲ ಪಿ.ಯು. ಕಾಲೇಜಿನ ಪ್ರಾಚರ್‍ಯರಾದ ಫಾ. ಪ್ರವೀಣ್ ಕುಮಾರ್ ಎಸ್.ಜೆ. , ಉಪ ಪ್ರಾಚರ್‍ಯರಾದ ಶ್ರುತಿ, ಖಾಸಿಂ, ಸಾಮಾಜಿಕ ಸೇವಾ ಕ್ಲಬ್‌ನ ಮುಖ್ಯ ಸಂಚಾಲಕರಾದ ಸುಭಾಷ್ ಸಿಂಗ್, ಡೇವಿಡ್ ಕುಮಾರ್ ಶಾಲೆಯ ಮುಖ್ಯ ಶಿಕ್ಷಕಿ ಸಿಸ್ಟರ್ ಜುಲಿಯೆಟ್,ನರೇಂದ್ರ ಸಿಂಗ್, ಸಾರಿಗೆ ಸಂಸ್ಥೆಯ ಕಿರಿಯ ಸಹಾಯಕ ಬಸಯ್ಯ ಗಡ್ಡಿ,ನಿಯಂತ್ರಕರಾದ ರಾಮಂಜನೇಯ್ಯ, ಸಹಾಯಕರಾದ ಈರಪ್ಪ ಸೇರಿದಂತೆ ಲೊಯೋಲಾ ಶಾಲೆಯ ವಿದ್ಯರ್ಥಿಗಳು ಭಾಗವಹಿಸಿದರು

# ವಿಂಡ್ ಪವರ್ ಫ್ಯಾನ್‌ಗಳಿಂದ ರೈತರಿಗೆ ಸಂಕಷ್ಟ

ಯುವಮಾರ್ಗ ಸುದ್ದಿ

**ಕುಷ್ಟಗಿ,ಜ.3–**ಭಾಗದ ರೈತರ ಹೊಲದಲ್ಲಿ ಗಾಳಿ ಯಂತ್ರಗಳ ಅಳವಡಿಸುವ ಮೂಲಕ ವಿಂಡ್ ಪವರ್ ಕಂಪನಿಗಳ ವಿದ್ಯುತ್ ಉತ್ಪಾದನೆ ಮಾಡುತ್ತಿವೆ.ಆದರೆ ಕಂಪನಿಗಳ ಧೋರಣೆ ಮತ್ತು ನಿರ್ಲಕ್ಷ್ಯದಿಂದಾಗಿ ರೈತರು ಮತ್ತು ಸಾರ್ವಜನಿಕರು ಸಂಕಷ್ಟವನ್ನು ಎದುರಿಸುತ್ತಿರುವ ಸ್ಥಿತಿ ನಿರ್ಮಾಣವಾಗಿದೆ.

ಕುಷ್ಟಗಿ ತಾಲೂಕಿನ ಮುದೇನೂರು,ಜುಮಲಾಪುರ, ದೋಟಿಹಾಳ,ಕೇಸೂರು,ಶಿ ರಗುಂಪಿ,ಬಿಜಕಲ್,ಕಿಲಾರಹಟ್ಟಿ,ಗುಮಗೇರಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೇರಿದಂತೆ ಕುಷ್ಟಗಿ ತಾಲೂಕಿನಾದ್ಯಂತ ಗಾಳಿ ವಿದ್ಯುತ್ ಉತ್ಪಾದನಾ ಕಂಪನಿಗಳು ನಿಯಮ ಗಾಳಿಗೆ ತೂರಿ ಮನಬಂದತೆ ನೂರಾರು ಫ್ಯಾನ್‌ಗಳನ್ನು ಅಳವಡಿಸಿವೆ.

ವಿಂಡ್ ಪವರ್ ಫ್ಯಾನಗಳನ್ನು ಹಾಕುವು ಮೊದಲು ಕಂಪನಿಯವರು ರೈತರಿಗೆ ಸರಿಯಾದ ಮಾಹಿತಿ ನೀಡದೇ ಹಾಗೂ ರೈತರಿಂದ ಭೂಮಿ ಖರೀದಿಸುವಾಗ ಯಾವುದೇ ತೊಂದರೆಯಾದಂತೆ ನೋಡಿಕೊಳ್ಳುತ್ತೇವೆ ಅಂತಹ ಹೇಳಿ ಭೂಮಿ ಪಡೆಯುವ ಕಂಪನಿಗಳು ನಂತರ ಸಮಸ್ಯೆಗಳಿಗೆ ಸ್ಪಂದಿಸದೇ ರೈತರೊಂದಿಗೆ ಬೇಕಾಬಿಟ್ಟಿಯಾಗಿ ವರ್ತಿಸುತ್ತಿದ್ದಾರೆ ಎಂದು ರೈತ ರಾಮಪ್ಪ ಹಡಪದ ಪ್ರತಿಕೆ ಮುಂದೆ ತಮ್ಮ ಹಳಲು ತೋಡಿಕೊಂಡಿದ್ದಾರೆ.

ಮುದೇನೂರು ಗ್ರಾಮದ ಕೆ.ಬೆಂಚಮಟ್ಟಿ ಸೀಮಾದ ಸರ್ವೇ ನಂ.24/3 ರಾಮಪ್ಪ ಹಡಪದ ಇವರ ಹೊಲದ ಪಕ್ಕದಲ್ಲಿ ಈಗಾಗಲೇ ಫ್ಯಾನ್ ಅಳವಡಿಸಿದ್ದಾರೆ.ಇದರಿಂದ ರಾಮಪ್ಪ ಹಡಪದ ಅವರ ಕೃಷಿ ಭೂಮಿಗೆ ತುಂಬಾ ತೊಂದರೆಯಾಗಿದೆ.ಫ್ಯಾನ್ ಕಂಬದ ನೆರಳು ಇವರ ಹೊಲದಲ್ಲಿ ಮತ್ತು ಬೆಳೆಯ ಮೇಲೆ ಬೀಳುವುದು ಮತ್ತು ನಿತ್ಯ ಫ್ಯಾನ್ ಸುತ್ತುವುದರಿಂದ ಬಿತ್ತನೆ ಮಾಡಿದ ಬೆಳೆಯ ಮೇಲೆ ಕರಿನೆರಳು ಆವರಿಸಿದೆ.

ನಿಯಮದಂತೆ ಫ್ಯಾನ್ ಅಳವಡಿಕೆಗೆ ಖರೀದಿಸುವ ಜಮೀನಿನಲ್ಲಿ ಫ್ಯಾನ್ ಕಂಬದ ನೆರಳು ಬಿಳಬೇಕು ಹಾಗೂ ಗಾಳಿ ಭೂಮಿಯಲ್ಲಿ ತಾಗಬೇಕು ಆದರೆ ಪಕ್ಕದ ಹೊಲದಲ್ಲಿ ನೆರಳು,ಗಾಳಿ ಬೀಸುವುದರಿಂದ ಬಿತ್ತನೆ ಮಾಡಿದ ಬೆಳೆಗಳು ನಾಶವಾಗುತ್ತಿದೆ ಎನ್ನುವುದು ರೈತರ ಗಂಭಿರ ಆರೋಪ.

ಈ ಸಮಸ್ಯೆ ಬಗ್ಗೆ ಕಂಪನಿಯವರನ್ನು ಕೇಳಲು ಹೋದರೆ ಅವರಿಗೆ ಧಮ್ಕಿ ಹಾಕುವುದು ,ಹೆದರಿಸುವ ಕಾರ್ಯ ಮಾಡುತ್ತಿದ್ದಾರೆ ಅಲ್ಲದೇ ,ಪಕ್ಕದ ರೈತರ ತಮ್ಮ ಹೊಲದಲ್ಲಿ ಕೃಷಿ ಚಟುವಟಿಕೆ ಮಾಡಬೇಕಾದರು ನಮ್ಮ ಪರವಣಿಗೆ ನೀವು ತಗೆದುಕೊಂಡಿದ್ದೀರಾ ಎಂದು ಪ್ರಶ್ನೆ ಮಾಡುತ್ತಿದ್ದಾರೆ ಎನ್ನುವು ಗಂಭೀರ ಆರೋಪ ಕೇಳಿ ಬಂದಿದೆ.

ಗಾಳಿ ಯಂತ್ರ ಅಳವಡಿಸುವ ಕಂಪನಿಗಳು ಮಾತ್ರ ರೈತರನ್ನು ಇನ್ನಿಲ್ಲದಂತೆ ಶೋಷಣೆ ಮಾಡುತ್ತಿದ್ದು,ಇದರಿಂದ ರೈತರು ರೋಸಿ ಹೋಗಿ ಆಕ್ರೋಶ ವ್ಯಕ್ತಪಡಿಸುತ್ತಿದ್ದರೂ ಅವರ ಅಳಲು ಕೇಳುವವರೇ ಇಲ್ಲದಂತಾಗಿದೆ.ಗಾಳಿ ವಿದ್ಯುತ್ ಉತ್ಪಾದನಾ ಕಂಪನಿಗಳು ನೀಡುವ ಎಂಜಲು ಕಾಸಿಗೆ ಕೈ ಚಾಚಿರುವ ಜನಪ್ರತಿನಿಧಿಗಳು.ಅಧಿಕಾರಿಗಳ ಜಾಣ ಕುರುಡುತನ ರೈತರ ಬದುಕನ್ನೇ ಬೀದಿಗೆ ತಂದು ನಿಲ್ಲಿಸಿದೆ.



ಮುದೇನೂರು ಗ್ರಾಮದ ರಾಮಪ್ಪ ಹಡಪದ ಅವರ ಜಮೀನು ಪಕ್ಕದಲ್ಲಿ ಅಳವಡಿಸಿದ ವಿಂಡ್ ಪವರ್ ಫ್ಯಾನ್



2–ಮುದೇನೂರು ಗ್ರಾಮದ ರಾಮಪ್ಪ ಹಡಪದ ಅವರ ಹೊಲದ ಬೆಳೆ ಮೇಲೆ ಪಕ್ಕದ ಜಮೀನಿನಲ್ಲಿ ಅಳವಡಿಸಿದ ವಿಂಡ್ ಪವರ್ ವಿದ್ಯುತ್ ಕಂಬದ ಕರಿ ನೆರಳು

ವಿಂಡ್ ಪವರ್ ಫ್ಯಾನ್ ಅಳವಡಿಕೆ ಕಂಪನಿಗಳು ರೈತರ ಮೇಲೆ ಮಾಡುತ್ತಿರುವ ಶೋಷಣೆ ಬಗ್ಗೆ ಚಳಿಗಾಲ ಅಧಿವೇಶನದಲ್ಲಿ ಚರ್ಚಿಸಿ ಸರಕಾರದ ಗಮನಕ್ಕೆ ತರಲಾಗಿದೆ.ಸರಕಾರ ಇದಕ್ಕೆ ಸರಿಯಾದ ಸುತ್ತೋಲೆ ಹೊರಡಿಸಿ ರೈತರನ್ನು ರಕ್ಷಣೆ ಮಾಡುವ ಕೆಲಸ ಮಾಡಬೇಕು.ಈ ಬಗ್ಗೆ ತಾಲೂಕ ಮಟ್ಟದ ಅಧಿಕಾರಿ ಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ. ದೊಡ್ಡನಗೌಡ ಎಚ್.ಪಾಟೀಲ್.ಶಾಸಕರು,ಕುಷ್ಟಗಿ

ಕೇಂದ್ರ ಹಾಗೂ ರಾಜ್ಯ ಸರಕಾರದ ನಡುವಳಿ ಪ್ರಕಾರ ಫ್ಯಾನ್ ಅಳವಡಿಸುವ ಕೆಲಸ ಮಾಡುತ್ತಿದ್ದಾರೆ.ಫ್ಯಾನ್ ಉದ್ದ ಅಳತೆ ಪ್ರಕಾರ ಗುಂಟೆ,ಎಕರೆ ಪ್ರಕಾರ ಜಮೀನು ಪಡೆಯುತ್ತಿದ್ದಾರೆ ಆದರೆ ಇದರಿಂದ ಪಕ್ಕದ ರೈತರಿಗೆ ತೊಂದರೆಯಾಗದಂತೆ ಕೆಲಸ ಮಾಡ ಬೇಕು,ರೈತರ ಮೇಲೆ ದಬ್ಬಾಳಿಕೆ,ದೌರ್ಜನ್ಯ ಬಗ್ಗೆ ದೂರು ನೀಡಿದರೆ ಕ್ರಮ ಕೈಗೊಳ್ಳಲಾಗುತ್ತದೆ.ಅಶೋಕ ಶಿಗ್ಗಾಂವಿ,ತಹಸೀಲ್ದಾರ,ಕುಷ್ಟಗಿ

### ಜಿಲ್ಲಾಡಳಿತ ದಿಂದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

# ಶಿಲ್ಪಕಲಾ ಕೌಶಲ್ಯಕ್ಕೆ ಅಮರಶಿಲ್ಪಿ ಜಕಣಾಚಾರಿಯವರು ಕೊಡುಗೆ ಅಪಾರ: ತಹಶಿಲ್ದಾರ್ ಸುರೇಶ್ ವರ್ಮಾ

ಯುವಮಾರ್ಗ ಸುದ್ದಿ



**ಸಿಂದನೂರು,ಜ.3** ಸದಾಕಾಲಕ್ಕೂ ಜೀವಂತವಾಗಿರುವ ಭಾರತೀಯ ಶಿಲ್ಪಕಲಾ ಕೌಶಲ್ಯಕ್ಕೆ ಅಮರಶಿಲ್ಪಿ ಜಕಣಾಚಾರಿಯವರು ಕೊಡುಗೆ ಅಪಾರ ವಾಗಿದೆಂದು ಎಂದು ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮಾ ಅವರು ಹೇಳಿದರು.

ಜನವರಿ 03ರ ಶನಿವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಯಚೂರು ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಾರತ ಸೇರಿದಂತೆ ವಿಶ್ವದ ವಿವಿಧ ಕಡೆ ಜಕಣಾಚಾರಿಯವರ ಶಿಲ್ಪಕಲೆಗಳು ಇಂದಿಗೂ ಜೀವಂತವಾಗಿದೆ. ಶಿಲ್ಪಕಲೆಗೆ ಅವರು ನೀಡಿರುವ ಕೊಡುಗೆಗೆ ಇವುಗಳೇ ಸಾಕ್ಷಿ. ಬೇಲೂರು, ಹಳೇಬೀಡು, ಸೋಮನಾಥಪುರ ದೇವಾಲಯಗಳಲ್ಲಿನ ಶಿಲ್ಪಕಲೆ ವಿಶ್ವಕರ್ಮರ ಪ್ರಸ್ತುತತೆಯನ್ನು ಬಿಂಬಿಸುತ್ತಿದೆ. ನಶಿಸಿಹೋಗುತ್ತಿರುವ ವಿಶ್ವಕರ್ಮರ ಕುಲಕಸುಬುಗಳನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸಿ, ಮುಂದುವರಿಸಲು ಎಲ್ಲರೂ ಪ್ರಯತ್ನಿಸಬೇಕು ಎಂದರು.

ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರ ಆಚಾರ ವಿಚಾರಗಳನ್ನು ಸಮಾಜದ ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕು. ಇಂದಿನ ಮಕ್ಕಳಿಗೆ ಅವರ ಆಚಾರ, ವಿಚಾರಗಳ ಮಾಹಿತಿಯನ್ನು ಒದಗಿಸುವ ಕೆಲಸವನ್ನು ಪೋಷಕರು ಮಾಡಬೇಕೆಂದರು.

ಈ ವೇಳೆ ಉಪನ್ಯಾಸಕರಾಗಿ ಎಸ್.ಆರ್.ಕೆ. ಶಿಕ್ಷಣ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಪಕರಾದ ಡಾ.ಸವಿತಾ ಪಂಪಾಪತಿ ಬಡಿಗೇರ್ ಅವರು ಮಾತನಾಡಿ, ಶಿಲ್ಪಕಲೆಗೆ ಅಮರಶಿಲ್ಪಿ ಜಕಣಾಚಾರಿ ಅವರ ಕೊಡುಗೆ ಅಪಾರ. ಆ ನಿಟ್ಟಿನಲ್ಲಿ ಸಮಾಜಕ್ಕೆ ಒಳ್ಳೆಯ ಶಿಲ್ಪಕಲೆಗಳನ್ನು ನೀಡಿದ್ದು, ಇವರ ಏಕಾಗ್ರತೆ, ಸಾಧನೆ ಸದಾ ಸ್ಮರಣೀಯ ಎಂದರು.

ಇಂದು ವಿಶ್ವವಿಖ್ಯಾತ ಶಿಲ್ಪಿಯ ಸಂಸ್ಮರಣೆ ಎಲ್ಲೆಡೆ ನಡೆಯುತ್ತಿದೆ. ಸೃಷ್ಟಿಯ ಮೂಲಕರ್ತೃವಾಗಿರುವ ಜಕಣಾಚಾರಿಯವರ ಶಿಲ್ಪಕಲಾ ಕುಶಲತೆ ಇಂದು ಜಗತ್ತಿನ ಎಲ್ಲೆಡೆ ಪಸರಿಸಿದೆ. ಪ್ರಪಂಚದ ಎಲ್ಲ ವಿದ್ಯೆಗಳ ಮೂಲವಾಗಿರುವ ಜಕಣಾಚಾರಿ ಅವರನ್ನು ಜಗತ್ತಿನ ಮೊದಲ ಮುಖ್ಯ ಎಂಜಿನಿಯರ್ ಎನ್ನಬಹುದು. ಜಕಣಾಚಾರಿಯವರು ಸಾಮಾನ್ಯ ಜನರಿಗೆ ದೇವರ ಪರಿಕಲ್ಪನೆ ನೀಡುವ ಮಧ್ಯಸ್ಥಿಕೆದಾರರಾಗಿದ್ದರು. ವಿಶ್ವಕರ್ಮರ ಶಿಲ್ಪಕಲೆ ಅಮರವಾಗಿದೆ ಎಂದರು.

ಶಿಲ್ಪಕಲೆಯಲ್ಲಿ ಶ್ರೀಮಂತ ಪರಂಪರೆ ಹೊಂದಿರುವ ವಿಶ್ವಕರ್ಮ ಸಮುದಾಯ ತಮ್ಮ ಕುಲಕಸುಬುಗಳ ಜೊತೆಗೆ ಶಿಕ್ಷಣ ಪಡೆದು ಸಂಘಟಿತರಾಗಬೇಕು. ಶೈಕ್ಷಣಿಕವಾಗಿ ಮುಖ್ಯವಾಹಿನಿಗೆ ಬರಬೇಕು. ಸಮುದಾಯದ ಇತರರಲ್ಲೂ ಜಾಗೃತಿ ಮೂಡಿಸಬೇಕು. ಜೀವನ ಸಾರ್ಥಕ ಪಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಸಮುದಾಯ ಎಚ್ಚೆತ್ತುಕೊಳ್ಳಬೇಕಾಗಿದೆ ಎಂದರು.

ಶಾಸಕರಿಂದ ಮಾಲಾರ್ಪಣೆ: ಇದಕ್ಕೂ ಮುಂಚೆ ನಗರದ ಕಾಳಿದೇವಿ ಆವರಣದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರ ಅದ್ದೂರಿ ಭಾವಚಿತ್ರ ಮೆರವಣಿಗೆಗೆ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಹಾಗೂ ವಿಧಾನ ಪರಿಷತ್ ಸದಸ್ಯರಾದ ಎ.ವಸಂತ ಕುಮಾರ್ ಅವರು ಚಾಲನೆ ನೀಡಿ, ಮಾಲಾರ್ಪಣೆ ಸಲ್ಲಿಸಿ ಗೌರವ ಅರ್ಪಿಸಿದರು. ಈ ವೇಳೆ ವಿವಿಧ ಗಣ್ಯರು ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರಿಗೆ ಸಾಥ್ ನೀಡಿದರು.

ಇದೇ ಸಂದರ್ಭದಲ್ಲಿ ದೇವದುರ್ಗದ ಮೂಲ ಪೀಠದ ವಿಶ್ವಕರ್ಮ ಶ್ರೀಮದ್ ಮದಾನೆಗುಂದಿ ಸರಸ್ವತಿ ಸಂಸ್ಥಾನದ ಶ್ರೀಶ್ರೀ ಮೌನೇಶ್ವರ ಮಹಾಸ್ವಾಮಿಗಳು, ಸೂರ್ಯ ನಾರಾಯಣ ಸ್ವಾಮಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ಎ. ಈರಣ್ಣ ಬಡಿಗೇರ, ವಕೀಲರಾದ ಬ್ರಹ್ಮ ಗಣೇಶ್, ಕೆ.ರಾಮು ಗಾಣಧಾಳ, ಹಿರಿಯ ಪತ್ರಕರ್ತರಾದ ಮಾರುತಿ ಬಡಿಗೇರ, ನಾಗರಾಜ ಪತ್ತಾರ್, ಡಾ.ವೆಂಕಟೇಶ ಅನ್ವರಿ, ಗಿರೀಶ್ ಆಚಾರಿ, ಜಯಂತ್ ಆಚಾರಿ, ಕೆ.ನರಸಪ್ಪ, ಮಲೇಶ, ಪ್ರಕಾಶ್ ಗುಂಜಹಳ್ಳಿ, ಸುರೇಶ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

ಯುವ ಮಾರ್ಗ
www.yuvamarga.com Yuva Marga yuva_marga_

# ಜೀ ರಾಮ್‌ಜಿ ಕಾಯ್ದೆ ರದ್ದತಿಗೆ ಆಗ್ರಹ

**ಬೆಂಗಳೂರು,ಜ3:**ಮಹಾತ್ಮಗಾಂಧಿ ನರೇಗಾ ಯೋಜನೆಯ ಹೆಸರು, ಸ್ವರೂಪ ಬದಲಾವಣೆಯನ್ನು ಪ್ರಬಲವಾಗಿ ವಿರೋಧಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರ ಹಳ್ಳಿ ಅಧಿಕಾರ ಕಸಿದುಕೊಂಡು ಗ್ರಾಮೀಣ ಆರ್ಥಿಕತೆಯನ್ನು ನಾಶಪಡಿಸಲು ಮುಂದಾಗಿದೆ ಎಂದು ಆಕ್ರೋಶ ಹೊರ ಹಾಕಿದ್ದಾರೆ.



ಈ ಹಿಂದಿನ ಯುಪಿಎ ಸರ್ಕಾರ ಜಾರಿಗೆ ತಂದಿದ್ದ ಮಹಾತ್ಮಗಾಂಧಿ ನರೇಗಾ ಯೋಜನೆ ಜನರಿಗೆ ಉದ್ಯೋಗದ ಹಕ್ಕನ್ನು ನೀಡಿತ್ತು. ಈ ಹಕ್ಕನ್ನು ಈಗ ಕಿತ್ತುಕೊಳ್ಳಲಾಗಿದೆ. ಇದು ಸರಿಯಲ್ಲ. ಮನರೇಗಾ ಯೋಜನೆಯನ್ನು ಪುನರ್ ಸ್ಥಾಪಿಸುವಂತೆ ಆಗ್ರಹಿಸಿದ ಅವರು, ಮನರೇಗಾ ಯೋಜನೆಯನ್ನು ಮೊದಲಿನ ಸ್ವರೂಪದಲ್ಲೇ ಮರುಸ್ಥಾಪಿಸುವಂತೆ ಆಗ್ರಹಿಸಿ ನಾವು ಹೋರಾಟವನ್ನು ಮುಂದುವರೆಸುತ್ತೇವೆ ಎಂದು ಹೇಳಿದರು.

ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಜತೆ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೋದಿ ಸರ್ಕಾರ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯನ್ನು ಹಿಂಪಡೆದು ವೀಬಿ ಜಿ ರಾಮ್ ಜಿ ಹೆಸರಿನಲ್ಲಿ ಹೊಸ ಕಾಯ್ದೆ ಜಾರಿಗೆ ತರುವ ಮುನ್ನ ರಾಜ್ಯ ಸರ್ಕಾರಗಳ ಅಭಿಪ್ರಾಯ ಕೇಳಿಲ್ಲ. ಯಾವ ಅಭಿಪ್ರಾಯವನ್ನು ಪಡೆಯದೇ ನೇರವಾಗಿ ಹೊಸ ಕಾಯ್ದೆ ಜಾರಿಗೊಳಿಸುವ ಮೂಲಕ ಸರ್ವಾಧಿಕಾರಿ ಧೋರಣೆಯನ್ನು ಪ್ರದರ್ಶಿಸಿದೆ ಎಂದು ದೂರಿದರು.

ಕೇಂದ್ರ ಸರ್ಕಾರದ ಈ ನಡೆಯ ವಿರುದ್ಧ ಕಾಂಗ್ರೆಸ್ ಹೋರಾಟ ನಡೆಸಿದೆ. ಮನರೇಗಾ ಯೋಜನೆಯನ್ನು ಮರು ಸ್ಥಾಪಿಸುವವರೆಗೂ ನಾವು ಹೋರಾಟ ನಡೆಸುತ್ತೇವೆ. ರೈತರ ಹೋರಾಟದಂತೆಯೇ ನಾವು ಹೋರಾಟ ಮಾಡುತ್ತೇವೆ. ಯಾರು ಬೇಕಾದರೂ ನಮ್ಮ ಜತೆ ಹೋರಾಟಕ್ಕೆ ಸೇರ್ಪಡೆಯಾಗಬಹುದು. ಸಂಘ ಸಂಸ್ಥೆಗಳು, ಪಕ್ಷಗಳು ಎಲ್ಲರೂ ನಮ್ಮ ಹೋರಾಟದಲ್ಲಿ ಭಾಗಿಯಾಗಬಹುದು ಎಂದರು.

ವೀಬಿ ಜಿ ರಾಮ್ ಜಿ ಕಾಯ್ದೆ ವಾಪಸ್ ಪಡೆದು ಮನರೇಗಾ ಯೋಜನೆಯನ್ನು ಮೊದಲಿನ ರೂಪದಲ್ಲೇ ಸ್ಥಾಪಿಸಬೇಕು. ಅಲ್ಲಿಯವರೆಗೂ ನಾವು ಹೋರಾಟ ನಡೆಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಆರ್‌ಎಸ್‌ಎಸ್ ಕೈವಾಡ-ಮನರೇಗಾ ಯೋಜನೆಯನ್ನು ಬದಲಿಸುವುದರ ಹಿಂದೆ ಆರ್‌ಎಸ್‌ಎಸ್‌ನ ಕೈವಾಡವಿದೆ. ಎಂದು ಅವರು ದೂರಿದರು.

ಮನುಸ್ಮೃತಿಯಿಂದ ಪ್ರೇರಣೆ ಪಡೆದಿರುವ ಆರ್‌ಎಸ್‌ಎಸ್‌ನವರಿಗೆ ಮಹಿಳೆಯರು, ದಲಿತರ ಕೈಯಲ್ಲಿ ಹಣ ಇರಬಾರದು. ಅವರು ಸ್ವಾಭಿಮಾನದಿಂದ ಬದುಕಬಾರದು ಅಂತ ಇದೆ. ಹಾಗಾಗಿಯೇ ಅವರು ಬಿಜೆಪಿ ಸರ್ಕಾರದ ಮೂಲಕ ವೀಬಿ ಜಿ ರಾಮ್ ಜಿ ಕಾಯ್ದೆಯನ್ನು ಜಾರಿ ಮಾಡಿದ್ದಾರೆ ಎಂದು ಆಕ್ರೋಶ ಹೊರ ಹಾಕಿದರು.

ಮನರೇಗಾ ಕಾಯ್ದೆಯನ್ನು ಮೊದಲಿನಂತೆಯೇ ಮರು ಸ್ಥಾಪಿಸಬೇಕು. ವೀಬಿ ಜಿ ರಾಮ್ ಜಿ ಕಾಯ್ದೆಯನ್ನು ರದ್ದು ಮಾಡಬೇಕು ಎಂದು ನಾನು ಈಗಾಗಲೇ ಪ್ರಧಾನಿ ಮೋದಿಯವರಿಗೆ ಪತ್ರ ಬರೆದಿದ್ದೇನೆ ಎಂದು ಹೇಳಿದ ಅವರು, ಮಹಾತ್ಮಗಾಂಧೀಜಿಯವರು ಗ್ರಾಮ ಸ್ವರಾಜ್‌ನ ಕನಸು ಕಂಡಿದ್ದರು. ಅದನ್ನು ನನಸು ಮಾಡುವುದಕ್ಕೆ ಮನರೇಗಾ ಹೆಜ್ಜೆಯಾಗಿತ್ತು. ಗಾಂಧಿಯನ್ನು ಗೋಡ್ಸೆ ಕೊಂದು ಹಾಕಿದ್ದರು. ಈಗ ಗಾಂಧೀಜಿ ಹೆಸರನ್ನು ಬದಲಾಯಿಸಿ 2ನೇ ಬಾರಿ ಬಿಜೆಪಿಯವರು ಗಾಂಧೀಜಿಯವರನ್ನು ಕೊಂದು ಹಾಕಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ದೂರಿದರು.

ನರೇಗಾ ಕಾಯ್ದೆ ಪ್ರಕಾರ ಜನಸಮಾನ್ಯರು, ಕೂಲಿ ಕಾರ್ಮಿಕರು ಕೃಷಿ ಕಾರ್ಯಗಳ ಜತೆಯಲ್ಲಿ ತಾವಿದ್ದ ಸ್ಥಳದಲ್ಲೇ ನರೇಗಾ ಅಡಿ ಕೂಲಿ ಕೆಲಸ ಮಾಡಲು ಅವಕಾಶ ಇತ್ತು. ಆ ಮೂಲಕ ಹಳ್ಳಿಗಾಡಿನ ಆರ್ಥಿಕತೆ ಕಟ್ಟಲು ಸಾಧ್ಯವಾಗಿತ್ತು. ಸ್ಥಳೀಯವಾಗಿ ಆಸ್ತಿ ಸೃಜನೆಯಾಗುತ್ತಿತ್ತು. ಉದ್ಯೋಗ ಕೇಳಿ ಪಡೆಯುವ ಹಕ್ಕು ಜನರಿಗಿತ್ತು. ಹೊಸ ಕಾಯ್ದೆ ಪ್ರಕಾರ ಈಗ ಇದ್ಯಾವುದೂ ಇಲ್ಲವಾಗಿದೆ ಎಂದರು.

ಮನರೇಗಾ ಕಾಯ್ದೆಯಡಿ ಕನಿಷ್ಠ 100 ದಿನ ಕೆಲಸ ನೀಡಬೇಕಿತ್ತು. ಅವರು ಎಲ್ಲಿ ವಾಸಿಸುತ್ತಾರೋ ಅಲ್ಲಿಯೇ ಕೆಲಸ ನೀಡಬೇಕಿತ್ತು. ಈಗ ಹೊಸ ಕಾಯ್ದೆ ಪ್ರಕಾರ ಸರ್ಕಾರ ಅಧಿಸೂಚಿತ ಪ್ರದೇಶದಲ್ಲಿ ಮಾತ್ರ ಉದ್ಯೋಗ ನೀಡಲಾಗುತ್ತದೆ. ಉದ್ಯೋಗ ದೊರೆಯುವ ಬಗ್ಗೆ ಯಾವುದೇ ಗ್ರಾಮ ಪಂಚಾಯ್ತಿಗಳಿಗೂ ಖಾತ್ರಿ ಇರುವುದಿಲ್ಲ ಎಂದರು. ಗ್ರಾಮ ಪಂಚಾಯ್ತಿಗಳಿಗೆ ಇದ್ದ ಅಧಿಕಾರವನ್ನು ಇದೀಗ ಕೇಂದ್ರ ಸರ್ಕಾರ ಕಿತ್ತುಕೊಂಡಿದೆ. ಇದು ಒಕ್ಕೂಟ ವ್ಯವಸ್ಥೆ ಮತ್ತು ಸಂವಿಧಾನಕ್ಕೆ ವಿರುದ್ಧವಾಗಿದೆ. ಈ ಕಾಯ್ದೆಯನ್ನು ರದ್ದು ಮಾಡಬೇಕು ಎಂದು ಅವರು ಪುನರುಚ್ಚರಿಸಿದರು.

ಹಳೇ ನರೇಗಾ ಕಾಯ್ದೆಯನ್ನೆ ಜಾರಿಗೊಳಿಸಿ ದಲಿತರು, ಮಹಿಳೆಯರ ಉದ್ಯೋಗದ ಹಕ್ಕನ್ನು ಪುನರ್ ಸ್ಥಾಪಿಸಬೇಕು. ಜತೆಗೆ ಪಂಚಾಯ್ತಿಗಳ ಸ್ವಯಂ ಆಡಳಿತದ ಹಕ್ಕನ್ನು ಮರು ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.ಹೊಸ ಕಾಯ್ದೆ ಮೂಲಕ ಗ್ರಾಮೀಣ ಜನರ ಹಕ್ಕನ್ನು ಕಸಿಯಲಾಗುತ್ತಿದೆ. ರಾಜ್ಯ ಸರ್ಕಾರಗಳ ಜತೆ ಚರ್ಚೆ ಮಾಡದೆ ರಾಜ್ಯಗಳ ಬಜೆಟ್ ಮೇಲೆ ಹೆಚ್ಚಿನ ಹೊರೆಯನ್ನು ಸಂವಿಧಾನ ಬಾಹಿರವಾಗಿ ಹೇರಲಾಗುತ್ತಿದೆ ಎಂದರು.

ಈ ಹಿಂದೆ ನರೇಗಾ ಯೋಜನೆಯಡಿ ಶೇ. 100 ರಷ್ಟು ಹಣವನ್ನು ಕೇಂದ್ರ ಸರ್ಕಾರವೇ ಭರಿಸುತ್ತಿತ್ತು. ಈಗ ಶೇ. 40 ರಷ್ಟು ಹಣವನ್ನು ರಾಜ್ಯ ಸರ್ಕಾರ ಭರಿಸಬೇಕಾಗುತ್ತದೆ. ಈ ಕಾಯ್ದೆಯ ವ್ಯತ್ಯಾಸ, ದೋಷಗಳ ಬಗ್ಗೆ ನಾವು ಜನರಿಗೆ ಮನವರಿಕೆ ಮಾಡಿಕೊಡುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಮನಮೋಹನ್‌ಸಿಂಗ್ ನೇತೃತ್ವದ ಯುಪಿಎ ಸರ್ಕಾರ ಉದ್ಯೋಗದ ಹಕ್ಕು, ಮಾಹಿತಿ ಹಕ್ಕು, ಶಿಕ್ಷಣ ಹಕ್ಕು ಮೊದಲಾದ ಕ್ರಾಂತಿಕಾರಿ ಯೋಜನೆಗಳನ್ನು ಜಾರಿಗೊಳಿಸಿ ಜನರಿಗೆ ಹೆಚ್ಚಿನ ಅಧಿಕಾರ ನೀಡುವ ಕೆಲಸ ಮಾಡಿತ್ತು. ಆದರೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮನಮೋಹನ್‌ಸಿಂಗ್ ರವರ ಜನಪರ ಕಾಯ್ದೆಯನ್ನು ಹಿಂಪಡೆಯುವ ಮೂಲಕ ಕಾರ್ಪೋರೇಟ್ ಕಂಪೆನಿಗಳಿಗೆ ಲಾಭ ಮಾಡಿಕೊಡುವ ಕೆಲಸ ಮಾಡುತ್ತಿದೆ ಎಂದು ದೂರಿದರು.

ಕಳೆದ 11 ವರ್ಷಗಳಲ್ಲಿ ಕೇಂದ್ರ ಸರ್ಕಾರದ ಸಾಧನೆ ಎಂದರೆ ಯುಪಿಎ ಸರ್ಕಾರ ಜಾರಿ ಮಾಡಿದ್ದ ಯೋಜನೆಗಳ ಹೆಸರು ಬದಲಾಯಿಸಿರುವುದು ಮಾತ್ರ. ಹಿಂದೆ ಜಾರಿಯಲ್ಲಿದ್ದ ಸುಮಾರು 30 ಯೋಜನೆಗಳ ಹೆಸರು ಬದಲಾವಣೆ ಅಥವಾ ಕಾಯ್ದೆಗಳನ್ನು ಹಿಂಪಡೆಯುವ ಕಾರ್ಯವನ್ನು ಮೋದಿ ಸರ್ಕಾರ ಮಾಡಿದೆ ಎಂದು ಹರಿಹಾಯ್ದರು.

ವರ್ಷದ ಯಾವುದೇ ಅವಧಿಯಲ್ಲಿ ಲಭ್ಯವಾಗುತ್ತಿದ್ದ ಕೂಲಿ ಕೆಲಸವನ್ನು ಈಗ ನಿರ್ಬಂಧಿಸಲಾಗಿದ್ದು, ಕೃಷಿ ಚಟುವಟಿಕೆಯ ಅವಧಿಯ 60 ದಿನ ಯೋಜನೆಯಡಿ ಯಾವುದೇ ಉದ್ಯೋಗ ನೀಡಲಾಗುವುದಿಲ್ಲ. ಹಣದುಬ್ಬರಕ್ಕೆ ತಕ್ಕಂತೆ ಕೂಲಿ ಹಣವನ್ನು ಸರಿದೂಗಿಸುವ ಅವಕಾಶವನ್ನು ಹೊಸ ಕಾಯ್ದೆಯಲ್ಲಿ ತೆಗೆದು ಹಾಕಲಾಗಿದೆ. ಜತೆಗೆ ರಾಜ್ಯ ಸರ್ಕಾರ ಹೊಸ ಕಾಯ್ದೆ ಪ್ರಕಾರ ಶೇ. 40 ರಷ್ಟು ಹಣವನ್ನು ಭರಿಸಬೇಕಾಗುತ್ತದೆ. ಇದು ರಾಜ್ಯಗಳ ಮೇಲೆ ಹಣಕಾಸು ಹೊರೆಯನ್ನು ಹೆಚ್ಚಿಸಲಿದೆ ಎಂದು ಹೇಳಿದರು.

ಹೊಸ ಕಾಯ್ದೆಯಿಂದ ನಿರುದ್ಯೋಗ ಹೆಚ್ಚಳ, ಉದ್ಯೋಗದಲ್ಲಿ ಮಹಿಳೆಯರ ಪಾಲುದಾರಿಕೆ ಇಳಿಕೆ, ದಲಿತ ಹಾಗೂ ಆದಿವಾಸಿ ಕುಟುಂಬಗಳ ಮೇಲೆ ಹೆಚ್ಚಿನ ಒತ್ತಡ ಸೃಷ್ಠಿಯಾಗಿ ಗ್ರಾಮೀಣ ಜೀವನೋಪಾಯಗಳ ಕುಸಿತದಿಂದ ಗ್ರಾಮೀಣರ ಬದುಕು ದುಸ್ತರಗೊಳ್ಳಲಿದೆ. ಪಂಚಾಯ್ತಿಗಳು ಕೇವಲ ಅನುಷ್ಠಾನ ಸಂಸ್ಥೆಗಳಾಗಿ ಕಾರ್ಯನಿರ್ವಹಿಸುವಂತಾಗುತ್ತವೆ. ಈ ಮೂಲಕ ಗುತ್ತಿಗೆದಾರರಿಗೆ ಹೆಚ್ಚಿನ ಅವಕಾಶ ಸೃಷ್ಠಿಸಲಾಗುತ್ತದೆ ಎಂದು ಅವರು ಹೇಳಿದರು.

ಈ ಹೊಸ ಕಾಯ್ದೆಯ ಹಿಂದೆ ಆರ್‌ಎಸ್‌ಎಸ್ ಇದೆ ಎಂದು ಪುನರುಚ್ಚರಿಸಿದ ಅವರು, 20 ವರ್ಷಗಳ ಹಿಂದೆ ಮನಮೋಹನ್ ಸಿಂಗ್ ಸರ್ಕಾರ ಈ ಕಾಯ್ದೆಯನ್ನು ಜಾರಿಗೊಳಿಸಿದ ಸಂದರ್ಭದಲ್ಲೇ ಬಿಜೆಪಿ ಈ ಯೋಜನೆಯನ್ನು ವಿರೋಧಿಸಿತ್ತು. ಆಹಾರ ಭದ್ರತಾ ಕಾಯ್ದೆಯನ್ನು ಸಹ ಗೇಲಿ ಮಾಡಿತ್ತು. ಜನಪರವಾದ ಕಾನೂನುಗಳನ್ನು ನಾಶ ಮಾಡುವುದೇ ಬಿಜೆಪಿಯ ಕೆಲಸ ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀಹೆಬ್ಬಾಳ್ಕರ್, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್, ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಇವರುಗಳು ಉಪಸ್ಥಿತರಿದ್ದರು.

# ಜಿ ರಾಮ್ ಜಿ ಯೋಜನೆ : ರಾಜ್ಯದಿಂದ ತಪ್ಪು ಮಾಹಿತಿ-ಬೊಮ್ಮಾಯಿ ಕಿಡಿ

**ಬೆಂಗಳೂರು:ಜ. 3–** ಜಿ ರಾಮ್ ಜಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಬಗ್ಗೆ ರಾಜ್ಯ ಸರ್ಕಾರ ಸುಳ್ಳು ಅಂಶಗಳನ್ನು ಹೇಳಿ ರಾಜ್ಯದ ಬಡವರ ಕೂಲಿಕಾರರ ದಾರಿ ತಪ್ಪಿಸುತ್ತಿದೆ. ಹಿಂದಿನ ನರೇಗಾ ಯೋಜನೆಯಲ್ಲಿ ಪ್ರತಿ ವರ್ಷ ನೂರು ದಿನಗಳ ಉದ್ಯೋಗ ಖಾತ್ರಿ ಇತ್ತು. ಈಗ 125 ದಿನಗಳಿಗೆ ಹೆಚ್ಚಿಗೆ ಮಾಡಿದೆ. ಈ 125 ದಿನಗಳನ್ನು ಗ್ರಾಮ ಪಂಚಾಯತಿಗಳೇ ನಿರ್ಧಾರ ಮಾಡಬಹುದು. ಆದರೆ ಕೇಂದ್ರ ಸರ್ಕಾರ ನಿರ್ಧಾರ ಮಾಡುತ್ತದೆ ಎಂಬ ಭೀತಿಯನ್ನು ಕಾರ್ಮಿಕರಲ್ಲಿ ಹುಟ್ಟಿಸುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.ಈ ಕುರಿತು ಎಕ್ಸ್ ಮಾಡಿರುವ ಅವರು, ಗ್ರಾಮೀಣ ಪ್ರದೇಶದಲ್ಲಿ ಕೃಷಿ ಚಟುವಟಿಕೆಗಳಿಗೆ ಮತ್ತು ರೈತರಿಗೆ ಅನುಕೂಲವಾಗಲು ಆರವತ್ತು ದಿನ ಕಾಲ ಕೃಷಿಯಲ್ಲಿ ಕೆಲಸ ಮಾಡಲು ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ವರ್ಷದಲ್ಲಿ ಎರಡು ಬಾರಿ ಉದ್ಯೋಗ ಖಾತ್ರಿಯ ಕೆಲಸಗಳನ್ನು ಕೃಷಿಗೋಸ್ಕರ ರಜೆ ನೀಡಲಾಗಿದೆ. ಇದನ್ನು ರಾಜ್ಯ ಸರ್ಕಾರ ಆಕ್ಷೇಪ ಮಾಡುವ ಮುಖಾಂತರ ರೈತ ವಿರೋಧಿ ಕೃಷಿ ವಿರೋಧಿ ನೀತಿ ಅನುಸರಿಸುತ್ತಿದೆ. ಇದು ಇಡೀ ದೇಶದ ರೈತರಿಂದ ಬೇಡಿಕೆಯ ಅನುಗುಣವಾಗಿದೆ. ಅಲ್ಲದೇ ಹೇಗಿದ್ದರೂ ವರ್ಷದಲ್ಲಿ 125 ದಿನ ಬಿಟ್ಟರೆ ಬೇರೆ ದಿನದಲ್ಲಿ ಬೇರೆ ರಂಗದಲ್ಲಿ ಕೆಲಸ ಮಾಡುವುದು ಅನಿವಾರ್ಯವಿದೆ ಎಂದು ತಿಳಿಸಿದ್ದಾರೆ. ಭ್ರಷ್ಟಾಚಾರ ತಡೆ-ಜಿ ರಾಮ್ ಜಿ ಯೋಜನೆಯಲ್ಲಿ ಒಂದು ವಾರದಿಂದ ಹದಿನೈದು ದಿನಗಳ ಒಳಗೆ ಕಡ್ಡಾಯವಾಗಿ ಕಾರ್ಮಿಕರ ವೇತನ ಕೊಡುವ ಬಗ್ಗೆ ಸ್ಪಷ್ಟವಾಗಿದೆ. ಆದಾಗ್ಯೂ ರಾಜ್ಯ ಸರ್ಕಾರ ಅನುದಾನ ಸಿಗದೇ ಇರುವ ವಿಚಾರವನ್ನು ಹೇಳಿ ಕಾರ್ಮಿಕರಿಗೆ ಈ ಯೋಜನೆಯಿಂದ ದೂರ ಮಾಡುತ್ತಿದೆ. ನರೇಗಾ ಯೋಜನೆಯಲ್ಲಿ ಹಲವಾರು ಪ್ರಕರಣಗಳು ಭ್ರಷ್ಟಾಚಾರದಿಂದ ಕೂಡಿರುವುದು ಯೋಜನೆಯ ದುರ್ಬಳಕೆ ಆಗಿರುವುದು. ಸುಳ್ಳು ಕೂಲಿಕಾರರ ಹೆಸರು ಹೇಳಿ ವೇತನ ತೆಗೆದಿರುವ ಲೋಪ ಇದ್ದು ಅದನ್ನು ಸರಿಪಡಿಸಲು ಬಯೊಮೆಟ್ರಿಕ್ ತಂತ್ರಜ್ಞಾನ ಬಳಸಿ ಸೋರಿಕೆ ತಡೆಗಟ್ಟಲು ಯೋಜನೆ ಮಾಡಿದರೆ ಇದರಿಂದ ವಂಚನೆ ಆಗುತ್ತದೆ ಎಂದು ಸುಳ್ಳನ್ನು ರಾಜ್ಯ ಸರ್ಕಾರ ಹೇಳುತ್ತಿದೆ ಎಂದು ಆರೋಪಿಸಿದ್ದಾರೆ.ಕೇಂದ್ರ ಮತ್ತು ರಾಜ್ಯ ಸರ್ಕಾರ 60/40 ಅನುಪಾತದಲ್ಲಿ ಅನುದಾನ ಹಂಚಿಕೊಳ್ಳುವ ನಿರ್ಧಾರದಿಂದ ಹೆಚ್ಚು ದಿನ ಹೆಚ್ಚು ಜನರಿಗೆ ಉದ್ಯೋಗ ಕೊಡಲು ಮತ್ತು ರಾಜ್ಯ ಸರ್ಕಾರಗಳು ಧುಂದು ವೆಚ್ಚ, ಅನುಪಯುಕ್ತ ವೆಚ್ಚ, ಭ್ರಷ್ಟಾಚಾರ ಕಡಿಮೆ ಮಾಡಿ ರೈತ ಕೂಲಿಕಾರರಿಗೆ ಸಹಾಯ ಮಾಡುವ ಚಿಂತನೆ ಮಾಡಬೇಕಿದೆ. ಅದನ್ನು ಮಾಡದೇ ಕೇಂದ್ರದ ಮೇಲೆ ಗೂಬೆ ಕೂರಿಸುತ್ತಿದ್ದಾರೆ ಎಂದು ಹೇಳಿದ್ದಾರೆ.ನಿರುದ್ಯೋಗ ನಿವಾರಣೆ-ಎಲ್ಲ ಮೇಲಿನ ಅಂಶಗಳಿಂದ 125 ದಿವಸ ಉದ್ಯೋಗ ಕೊಡುವುದರಿಂದ ಗ್ರಾಮೀಣ ಪ್ರದೇಶದ ನಿರುದ್ಯೋಗ ಸಮಸ್ಯೆಯನ್ನು ನಿವಾರಣೆ ಮಾಡಲು ಸಾಧ್ಯವಾಗುತ್ತದೆ. ಈ ಯೋಜನೆಯಲ್ಲಿದ್ದ ಭ್ರಷ್ಟಾಚಾರ ಸಂಪೂರ್ಣ ನಿವಾರಣೆ ಆಗುತ್ತದೆ. ಹಾಗೂ ಬಡವರು ಕಾರ್ಮಿಕರು ದೀನ ದಲಿತರಿಗೆ ನ್ಯಾಯ ಸಮ್ಮತ ಕೆಲಸ ಮತ್ತು ಕೂಡಲೇ ವೇತನ ಸಿಗುವ ವ್ಯವಸ್ಥೆ ಆಗುತ್ತದೆ. ಪಂಚಾಯತಿಗಳು ಯೋಜನೆಯನ್ನು ರೂಪಿಸುವ, ಅನುಷ್ಠಾನ ಮಾಡುವ ಸರ್ವ ಸ್ವತಂತ್ರ ಹೊಂದುತ್ತವೆ. ರಾಜ್ಯ ಸರ್ಕಾರದ ಮಧ್ಯ ಪ್ರವೇಶ ದಿಂದ ಮುಕ್ತವಾಗುತ್ತವೆ.ಗ್ರಾಮೀಣ ಅವಶ್ಯಕತೆಯ ತಕ್ಕಂತೆ ಆಸ್ತಿಗಳ ನಿರ್ಮಾಣ ಆಗುತ್ತದೆ. ಇದರಿಂದ ವಿಕಸಿತ ಭಾರತದ ಗುರಿಗೆ ಗ್ರಾಮೀಣ ಪ್ರದೇಶದ ಬದುಕು ಮತ್ತು ವಿಕಾಸ ಮುಖಾಂತರ ಸಾಧನೆ ಆಗುವ ಕಲ್ಪನೆಯಿಂದ ಈ ಯೋಜನೆಯನ್ನು ಕೇಂದ್ರ ಸರ್ಕಾರ ತಂದಿದೆ. ನಾನು ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹ್ವಾಣ್ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದ್ದಾರೆ.

# ಬಳ್ಳಾರಿ ಗಲಭೆ,45 ಮಂದಿ ವಶಕ್ಕೆ

**ಬಳ್ಳಾರಿ.ಜ.3:**ನಗರದಲ್ಲಿ ಬ್ಯಾನರ್ ಕಟ್ಟುವ ವಿಚಾರದಲ್ಲಿ ಶಾಸಕರಾದ ನಾರಾ ಭರತ್‌ರೆಡ್ಡಿ ಮತ್ತು ಜನಾದನರೆಡ್ಡಿ ನಡುವೆ ಘರ್ಷಣೆ ನಡೆದ ಪ್ರಕರಣ ಕುರಿತಂತೆ ತನಿಖೆ ಚುರುಕುಗೊಳಿಸಿರುವ ಪೊಲೀಸರು 45 ಮಂದಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

ಸ್ವಯಂ ಪ್ರೇರಿತ ದೂರಿನ ಅಡಿಯಲ್ಲಿ 45 ಮಂದಿ ಜನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿ ಮಾಹಿತಿ ಸಂಗ್ರಹಿಸಿದ್ದಾರೆ, ಪೊಲೀಸರು ವಶಕ್ಕೆ ಪಡೆದಿರುವ ವ್ಯಕ್ತಿಗಳನ್ನು ಅಲ್ಲಲ್ಲಿ ಇರಿಸಿ ಅವರಿಗೆ ಗಲಾಟೆಯಲ್ಲಿ ಅವರು ಮಾಡಿದ ಅಪರಾಧ ಕೃತ್ಯಗಳನ್ನು ವಿಡಿಯೋ ಮೂಲಕ ತೋರಿಸಿ ವಿಚಾರಣೆ ಮಾಡುತ್ತಿದ್ದಾರೆ.

ಈ 45 ಜನರಲ್ಲಿ ಕಾಂಗ್ರೆಸ್ ಹಾಗು ಬಿಜೆಪಿ ಗುಂಪಿನ ಮತ್ತು ಸಾರ್ವಜನಿಕರು ಇದ್ದಾರೆ.ಮುಖ್ಯವಾಗಿ ಜನಾರ್ಧನ ರೆಡ್ಡಿ ಮತ್ತು ಕಾಂಗ್ರೆಸ್ ನ ಚಾನಾಳ್ ಶೇಖರ್ ನೀಡಿರುವ ದೂರಿಗೆ ಸಂಬಂಧಿಸಿ ಈ ವರೆಗೆ ಯಾರನ್ನೂ ವಶಕ್ಕೆ ಪಡೆದಿಲ್ಲ.

ಶಾಸಕ ಭರತ್ ರೆಡ್ಡಿ ಸೇರಿ 23 ಜನರ ವಿರುದ್ದ ದೂರುನಗರದಲ್ಲಿನ ತಮ್ಮ ನಿವಾಸದ ಬಳಿ ಜ.1 ರಂದು ನಡರದ ಬ್ಯಾನರ್ ಗಲಾಟೆ, ಫೈರಿಂಗ್ ಪ್ರಕರಣದ ಬಗ್ಗೆ ಗಂಗಾವತಿ ಶಾಸಕ ಜನಾರ್ಧನರೆಡ್ಡಿ.

ನಗರ ಶಾಸಕ ನಾರಾ ಭರತ್ ರೆಡ್ಡಿ, ಆಪ್ತರಾದ ಚಾನಾಳ್ ಶೇಖರ್, ಸತೀಶ್ ರೆಡ್ಡಿ ಸೇರಿದಂತೆ. 23 ಜನರ ವಿರುದ್ದ ಬ್ರೂಸ್ ಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಹವಂಬಾಯಿ ಲೋಕೇಶ್, ಹನುಮಂತು, ರತ್ನಬಾಬು, ಮಿಂಚು ಶೀನಾ, ಬೈಲೂರು ಶ್ರೀನಿವಾಸ್, ಹನುಂತರೆಡ್ಡಿ, ಅಲಿಯಾಸ್ ಪೋಲಕ್ ರೆಡ್ಡಿ, ವರಪ್ರಸಾದ್,ಬೋಯಪಾಟಿ ವಿಷ್ಣು, ಹಮಾಲಿ ಚೌಡಪ್ಪ, ಬಾಲರಾಜು ಶ್ರಿರಾಂಪುರ ಕಾಲೋನಿ, ಎಸ್ಪಿ ಸರ್ಕಲ್ ಶಶಿ, ಖಾದರ್, ಪ್ರದೀಪ್, ಮಿಲ್ಲರ್ ಪೇಟೆ ರಾಮು, ರಾಜು ಟಿ.ಹೆಚ್. ಟಿ.ಎ.ಸೀನಾ, ಥೇಟರ್ ಶಿವು, ಷಾನುಬುಕಿ, ರವಿ ಟಿ,



ಖಾಸಗೀ ಗನ್ ಮ್ಯಾನ್ ಸತೀಶ್ ರೆಡ್ಡಿ ಮತ್ತಿತರ ಮೇಲೆ ದೂರು ದಾಖಲಿಸಿದ್ದಾರೆ.

ಗಂಗಾವತಿಯಿಂದ ಯಥಾರೀತಿ ನಾನು ಜ.1 ರಂದು ಸಂಜೆ ಮನೆಗೆ ತಲುಪಿದಾಗ ಕಾರಿನಿಂದ ಕೆಳಗೆ ಇಳಿಯುತ್ತಿದ್ದಂತೆ ನಮ್ಮ ಮನೆಯ ಹತ್ತಿರ ಮಾಜಿ ಸಚಿವ ಬಿ.ಶ್ರೀರಾಮುಲು ಮತ್ತು ನನ್ನ ಅಪ್ತ ಸಹಾಯಕ ಮೆಹಫೂಜ್ ಅಲಿಖಾನ್, ಗಲಾಟೆಯನ್ನು ತಿಳಿದುಕೊಂಡು ನನ್ನ ಮನೆಗೆ ತಲುಪಿದ್ದು, ನನ್ನ ಮನೆಯ ಮುಂದೆ ಭಾರಿ ಜನ ಸಮೂಹ ಜಮಾಯಿಸಿತ್ತು ಅವರಲ್ಲಿ ಚಾನಾಳ್ ಶೇಖರ್, ಹವಂಬಾವಿ ಲೋಕೇಶ್, ಸತೀಶ್ ರೆಡ್ಡಿ, ಹನುಮಂತು ಮತ್ತು ಸತೀಶ್ ರೆಡ್ಡಿಯ ಖಾಸಗಿ ಅಂಗ ರಕ್ಷಕರು ಮತ್ತು ಅವರ ನೂರಾರು ಬೆಂಬಲಿಗರು ಮಾರಕಾಸ್ತ್ರಗಳನ್ನು ಹಿಡಿದು ದೊಡ್ಡ ಮಟ್ಟದಲ್ಲಿ ಗಲಾಟೆ ದಾಂಧಲೆ ಮಾಡಲು ಏಕಾಏಕಿ ನನ್ನ ಮೇಲೆ, ನನ್ನನ್ನು ಕೊಲೆ ಮಾಡುವ ಉದ್ದೇಶದಿಂದ ಖಾಸಗಿ ಅಂಗರಕ್ಷಕರು ತಮ್ಮ ಗನ್ ನಿಂದ ಗುಂಡು ಹಾರಿಸಿದರು. ಜಮಾಸಿದ್ದ ಜನರು ಕಲ್ಲು ತೂರಿ ಕಾರದಪುಡಿ, ಬಾಟಲ್ ಗಳಿಂದ ಮತ್ತು ಕಟ್ಟಿಗೆಗಳಿಂದ ಹಲ್ಲೆಗೆ ಮುಂದಾದರು. ನನ್ನ ಮೇಲೆ ಹಾರಿಸಿದ ಗುಂಡು ಗುಂಪಿನಲ್ಲಿ ಸೇರಿದ ನೂಕು ನುಗ್ಗಿದಾಗ, ತಳ್ಳಿದಾಗ ನನ್ನ ಮೇಲೆ ಇಟ್ಟು ಗುರಿ ತಪ್ಪಿತು. ನಗರದ ಶಾಸಕ ನಾರಾ ಭರತ್ ರೆಡ್ಡಿ ಸಾವಿರಾರು ಜನರ ಆಕ್ರಮ ಗುಂಪನ್ನು ಕಟ್ಟಿಕೊಂಡು ಬಂದು ದಾಳಿಯನ್ನು ಇನ್ನಷ್ಟು ತೀವ್ರಗೊಳಿಸಿದರು, ಆಗ ರತ್ನ ಬಾಬು ಮಹಾನಗರ ಪಾಲಿಕೆಯ ಸದಸ್ಯ ಮಿಂಚುಸೀನಾ ಮತ್ತು ಬೈಲೂರು ಶ್ರೀನಿವಾಸ್ ರೆಡ್ಡಿ ತಂದೆ ಪಂಪಾರೆಡ್ಡಿ, ಹನುಮಂತರೆಡ್ಡಿ, ಅಲಿಯಾಸ್ ವೊಲಕ್ ರೆಡ್ಡಿ, ವರಪ್ರಸಾದ್, ಬೋಯಪಾಟಿ ವಿದು, ಹಮಾಲಿ ಚೌಡಪ್ಪ, ಬಾಲರಾಜು (ಶ್ರೀರಾಂಪುರ ಕಾಲೋನಿ) ಮೊದಲಾದವರು ಕಲ್ಲು ತೂರಾಟ ಅಲ್ಲದೇ ಕಾರದಪುಡಿ, ಸೋಡಾ ಬಾಟಲ್, ಪೆಟ್ರೋಲ್ ಬಾಂಬ್ ಎಸೆತ ಮುಂತಾದ ಅಪರಾದ ಕೃತ್ಯ ಎಸಗಿರುತ್ತಾರೆ, ಸ್ಮಳಕ್ಕೆ ಬಂದ ಪೊಲೀಸರಿಗೆ ಗುಂಪನ್ನು ಚದುರಿಸಲು ಸಾಧ್ಯವಾಗಲಿಲ್ಲ ಮತ್ತು ಮದ್ಯ ರಾತ್ರಿಯ ವರೆಗೂ ನನ್ನ ಮನೆಯ ಮುಂದೆ ಜಮಾಯಿಸಿದ ಬೆಂಬಲಿಗರೊಂದಿಗೆ ಘೋಷಣೆಗಳನ್ನು ಕೂಗುವುದನ್ನು ಮುಂದುವರೆಸಿದರು.

ಈ ಘಟನೆಯಿಂದ ಪ್ರಾಣಕ್ಕೆ ಹಾಗೂ ನನ್ನ ಘನತೆಗೆ ಚ್ಯುತಿ ತರುವ ಕೆಲಸವಾಗಿದ್ದು ಇದು ಒಂದು ವ್ಯವಸ್ಥಿತ ಸಂಚಾಗಿದ್ದು ಈ ಘಟನೆಯಲ್ಲಿ ಅಲ್ಲೇ ಇದ್ದ ನಮ್ಮ ಪಕ್ಷದ ಕಾರ್ಯಕರ್ತರು ಹಾಗೂ ಮುಖ್ಯವಾಗಿ ಪೊಲೀಸ್ ಅಧಿಕಾರಿಗಳಿಗೂ ಸಿಬ್ಬಂದಿಗಳಿಗೂ ಗಾಯಗಳಾಗಿದ್ದು ಭಾರತೀಯ ಜನತಾ ಪಕ್ಷದ ಬಳ್ಳಾರಿ ಮಹಾನಗರ ಪಾಲಿಕೆ ಸದಸ್ಯ ಕಲ್ಪನಾ ಅವರ ಪತಿ ವೆಂಕಟರಾಮರೆಡ್ಡಿ, ಸೂರ್ಯಪ್ರಕಾಶ್ ಮತ್ತು ಕ್ರಿಷ್ಣ, ಟಿ,ಹೆಚ್ ಪದ್ಮಾವತಿ, ಭಾಗ್ಯಲಕ್ಷ್ಮಿ, ರವರು ತೀವ್ರವಾಗಿ ಗಾಯಗೊಂಡಿದ್ದಾರೆ. , ನಾನು ಈ ಘಟನೆಯಿಂದ ಹೇಗೋ ಪ್ರಾಣಾಪಾಯದಿಂದ ಪಾರಾಗಿದ್ದೇನೆ, ಈ ಕೂಡಲೇ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ದೂರು ನೀಡಿದ್ದಾರೆ.

## ಸಂತಪೂರ ಠಾಣೆಯಿಂದ ಭರ್ಜರಿ ದಾಳಿ :11 ಲಕ್ಷಕ್ಕೂ ಅಧಿಕ ಮೌಲ್ಯದ ಗಾಂಜಾ, ಆಟೋ ವಶ ಆರೋಪಿತರ ಬಂಧನ

**ಔರಾದ್ :ಜ.3–** ಸಂತಪೂರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಮಹತ್ವದ ಕಾರ್ಯಾಚರಣೆಯಲ್ಲಿ 11 ಲಕ್ಷಕ್ಕೂ ಅಧಿಕ ಮೌಲ್ಯದ ಗಾಂಜಾ ಹಾಗೂ ಆಟೋ ವಾಹನವನ್ನು ಪೊಲೀಸರು ವಶಪಡಿಸಿಕೊಂಡು ಆರೋಪಿತರನ್ನು ಬಂಧಿಸಿದ್ದಾರೆ.

ಬೀದರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಐಪಿಎಸ್ ಅವರ ನಿರ್ದೇಶನದಂತೆ, ಜಂಬಗಿ (ಬಿ) ಶಿವಾರ ಅರಣ್ಯ ಪ್ರದೇಶದಲ್ಲಿ ತೆಲಂಗಾಣದಿಂದ ಅನಧಿಕೃತವಾಗಿ ಗಾಂಜಾ ಸಾಗಾಟ ನಡೆಯುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಪೊಲೀಸರು ದಾಳಿ ನಡೆಸಿದರು.

ಭಾಲ್ಕಿ ಉಪವಿಭಾಗದ ಡಿವೈಎಸ್,ಪಿ ಶಿವಾನಂದ ಪವಾಡಶೆಟ್ಟಿ ಮಾರ್ಗದರ್ಶನ ದಂತೆ ಔರಾದ ಸಿಪಿಐ ರಘುವೀರಸಿಂಗ್ ಠಾಕೂರ ಅವರ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ 20 ಕೆಜಿ 630 ಗ್ರಾಂ ಗಾಂಜಾ (ಅಂದಾಜು ಮೌಲ್ಯ 10.31 ಲಕ್ಷ) ಹಾಗೂ ಒಂದು ಆಟೋ (ಅಂದಾಜು ಮೌಲ್ಯ 80 ಸಾವಿರ) ಸೇರಿ ಒಟ್ಟು 11.11 ಲಕ್ಷ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಈ ಕಾರ್ಯಾಚರಣೆಯಲ್ಲಿ ಸಂತಪೂರ ಪೊಲೀಸ್ ಠಾಣೆಯ ಪಿ,ಎಸ್,ಐ ದಿನೇಶ್ ಎಂ.ಟಿ ಅವರೊಂದಿಗೆ ಠಾಣೆಯ ಅಧಿಕಾರಿ ಹಾಗೂ ಸಿಬ್ಬಂದಿಗಳಾದ ಶೇಷರಾವ್ (ಎಎಸ್,ಐ), ಅರುಣಸಿಂಗ್, ರಾಮರೆಡ್ಡಿ, ಸುಭಾಷ, ಗೌತಮ, ಕೊಟ್ರೇಶ ಮತ್ತು ದತ್ತಾತ್ರಿ ಅವರು ಪಾಲ್ಗೊಂಡಿದ್ದರು.

ಈ ಸಂಬಂಧ ಆರೋಪಿತರನ್ನು ಬಂಧಿಸಿ ಪ್ರಕರಣ ದಾಖಲಿಸಿಕೊಂಡು ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

# ತಿಂಥಣಿ ಕನಕ ಗುರುಪೀಠದಲ್ಲಿ ಜ. 12ರಿಂದ ಹಾಲುಮತ ಪೂಜಾರಿಗಳಿಗೆ 3 ದಿನಗಳ ತರಬೇತಿ ಹಾಗೂ ಸಾಹಿತ್ಯ ಸಮ್ಮೇಳನ

ಯುವಮಾರ್ಗ ಸುದ್ದಿ

**ಕವಿತಾಳ,ಜ.3–** ಲಿಂಗಸಗೂರ ತಾಲೂಕಿನ ತಿಂಥಣಿ ಗ್ರಾಮದ ಕನಕ ಗುರುಪೀಠದಲ್ಲಿ ಇದೇ ತಿಂಗಳ 12, 13 ಮತ್ತು 14 ರಂದು ರಾಜಕೀಯೇತರವಾಗಿ 'ಹಾಲುಮತ ಪೂಜಾರಿಗಳಿಗೆ ತರಬೇತಿ ಹಾಗೂ ಸಾಹಿತ್ಯ ಸಮ್ಮೇಳನ'ವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ರಾಯಚೂರು ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರು ಹಾಗೂ ವಕೀಲರಾದ ಶಿವಣ್ಣ ಟಿ. ಸುದ್ದಿಗೊಷ್ಠಿಯಲ್ಲಿ ತಿಳಿಸಿದರು.

ಈ ಕುರಿತು ಸುದ್ದಿಗೋಷ್ಠಿ ಮಾತನಾಡಿ ಅವರು

ಹಾಲುಮತ ಧರ್ಮವು ಸುಮಾರು 2500 ವರ್ಷಗಳ ಐತಿಹಾಸಿಕ ಹಿನ್ನೆಲೆಯನ್ನು ಹೊಂದಿದೆ. ಸಮಾಜವನ್ನು ಧಾರ್ಮಿಕವಾಗಿ ಮತ್ತು ಸಾಂಸ್ಕೃತಿಕವಾಗಿ ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಪ್ರಸ್ತುತ ಪೂಜಾರಿಗಳು ಆರ್ಥಿಕವಾಗಿ ಹಾಗೂ ಸಾಂಸ್ಕೃತಿಕವಾಗಿ ಹಿಂದುಳಿದಿದ್ದು, ಅವರ ಕುಟುಂಬಗಳ ಏಳಿಗೆ ಹಾಗೂ ಸಮಾಜ ಸುಧಾರಣೆಗಾಗಿ ಈ ತರಬೇತಿ ಅತ್ಯಗತ್ಯವಾಗಿದೆ ಎಂದರು.



ಮೂರು ದಿನಗಳ ಕಾಲ ನಡೆಯುವ ಈ ಶಿಬಿರದಲ್ಲಿ ಪೂಜಾರಿಗಳಿಗೆ ಸಂಸ್ಕೃತ ಪಠಣ, ಧರ್ಮ ಜಾಗೃತಿ, ಸಾಂಪ್ರದಾಯಿಕ ಪೂಜಾ ವಿಧಾನಗಳು ಹಾಗೂ ಹಾಲುಮತ ಸಂಸ್ಕೃತಿ ಮತ್ತು ಸಾಹಿತ್ಯದ ಬಗ್ಗೆ ಬೋಧನೆ ಮಾಡಲಾಗುವುದು. ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಲಿರುವ ಪಂಡಿತರು ಹಾಗೂ ವಿಷಯ ತಜ್ಞರು ತರಬೇತಿ ನೀಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ರಾಯಚೂರು ಜಿಲ್ಲೆಯ ಸಮಾಜದ ಹಿರಿಯ ಮುಖಂಡರು, ಸಮಾಜ ಬಾಂಧವರು, ಪೂಜಾರಿಗಳು ಹಾಗೂ ಅವರ ವಿದ್ಯಾವಂತ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತರಬೇತಿಯ ಸದುಪಯೋಗ ಪಡೆದುಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಮಾನವಿ ತಾಲೂಕು ಕನಕ ಗುರುಪೀಠದ ಅಧ್ಯಕ್ಷ ಮಲ್ಲಯ್ಯ ನಸ್ಲಾಪೂರ, ಮುಖಂಡರಾದ ಮಾಜಿ ಜಿ.ಪಂ. ಸದಸ್ಯ ಮಾಳಪ್ಪ ತೋಳ, ಮೌನೇಶ ಹಿರೇಕುರುಬರ್, ಕರಿಯಪ್ಪ ತೊಪ್ಪಲಸೊಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೆಟ್ಟದ ಶ್ರೀಶೈಲ ಶ್ರೀ ಮಲ್ಲಿಕಾರ್ಜುನ ಸ್ವಾಮಿ ಮಹಾರಥೋತ್ಸವ

ಯುವಮಾರ್ಗ ಸುದ್ದಿ

**ಮಾನ್ವಿ,ಜ.3–** ಪಟ್ಟಣದ ಐತಿಹಾಸಿಕ ಬೆಟ್ಟದ ಶ್ರೀಶೈಲ ಶ್ರೀ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನದಲ್ಲಿ ಬನದ ಹುಣ್ಣಿಮೆ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು ಬೆಳಿಗ್ಗೆ ಶ್ರೀ ಮಲ್ಲಿಕಾರ್ಜುನ ಸ್ವಾಮಿ ಮೂರ್ತಿಗೆ ರುದ್ರಭಿಷೇಕ,ಬಿಲ್ವರ್ಚಾನೆ, ಮಹಾಮಂಗಳಾರತಿ ನಡೆಯಿತು ಅಕ್ಕಿಯಿಂದ ಮಾಡಿದ ಕೀರಿಟವನ್ನು ಸ್ವಾಮಿಯ ಮೂರ್ತಿಗೆ ಹಾಕಿ ವಿಶೇಷ ಅಲಂಕಾರವನ್ನು ಮಾಡಲಾಯಿತು. ದೇವಸ್ಥಾನದ ಆವರಣದಲ್ಲಿನ ಶ್ರೀ ಭ್ರಮರಾಂಭ ದೇವಿ ಮೂರ್ತಿಗೆ ಅಭಿಷೇಕ ಹಾಗೂ ಮಹಾಮಂಗಳಾರತಿ ವಿಶೇಷ ಅಲಂಕಾರ ಮಾಡಲಾಯಿತು. ಸಂಜೆ ಪಲ್ಲಕ್ಕಿಯಲ್ಲಿ ಶ್ರೀಶೈಲ ಶ್ರೀ ಮಲ್ಲಿಕಾರ್ಜುನ ಸ್ವಾಮಿ ಉತ್ಸವ ಮೂರ್ತಿಯನ್ನು ಕೂಡಿಸಿ ಮೆರವಣಿಗೆ ನಡೆಸಿ ರಥದಲ್ಲಿ ಕೂಡಿಸಿ ಸಾವಿರಾರು ಭಕ್ತರಿಂದ ರಥೋತ್ಸವ ನಡೆಯಿತು.



ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸಾದಶಿವ ಮಹಾಸ್ವಾಮಿಗಳು, ಸುವರ್ಣಗೀರಿ ಮಠದ ಶ್ರೀ ಶಂಕರಯ್ಯಸ್ವಾಮಿಗಳು ಸೇರಿದಂತೆ ಮಾನ್ವಿ ಪಟ್ಟಣ ಹಾಗೂ ಸುತ್ತ ಮುತ್ತಲಿನ ಗ್ರಾಮಗಳ ಸಾವಿರಾರು ಭಕ್ತರು ರಥೋತ್ಸವದಲ್ಲಿ ಭಾಗವಹಿಸಿದರು.

ಬೆಟ್ಟದ ಶ್ರೀಶೈಲ ಶ್ರೀ ಮಲ್ಲಿಕಾರ್ಜುನ ಸ್ವಾಮಿ ಹಾಗೂ ಶ್ರೀ ಭ್ರಮರಾಂಭ ದೇವಿ ದೇವಸ್ಥಾನ ಸಮಿತಿಯಿಂದ ಭಕ್ತರಿಗೆ ಅಗತ್ಯವ್ಯವಸ್ಥೆ ಕಲ್ಪಿಸಲಾಗಿತ್ತು.

# ಮೌಲಾನಾ ಅಬ್ದುಲ್ ಕಲಾಂ ಆಜಾದ್ ಬ್ರಿಗೇಡ್ ನೂತನ ಅಧ್ಯಕ್ಷರಾಗಿ ಜಮೀಲ್ ಇಸ್ಮಾಯಿಲ್ ನೇಮಕ

ಯುವಮಾರ್ಗ ಸುದ್ದಿ

**ಮಾನ್ವಿ,ಜ.3–** ಮೌಲಾನಾ ಅಬ್ದುಲ್ ಕಲಾಂ ಆಜಾದ್ ಬ್ರಿಗೇಡ್ ಮಾನವಿ ತಾಲೂಕು ಘಟಕಕ್ಕೆ ನೂತನ ಅಧ್ಯಕ್ಷರಾಗಿ ಜಮೀಲ್ ಇಸ್ಮಾಯಿಲ್ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಅಜ್ಮೀರ್ ಪಾಷಾ ಅವರು ನೇಮಕಗೊಂಡಿದ್ದಾರೆ.

ಮೌಲಾನಾ ಅಬ್ದುಲ್ ಕಲಾಂ ಆಜಾದ್ ಬ್ರಿಗೇಡ್ ನ ರಾಯಚೂರು ಜಿಲ್ಲಾ ಅಧ್ಯಕ್ಷ ಸೈಯದ್ ಹುಸೇನ್ ಸಾಹೇಬ್ ಅವರ ನೇತೃತ್ವದಲ್ಲಿ ಮಾನ್ವಿಯಲ್ಲಿ ನಡೆದ ತಾಲೂಕ ಘಟಕದ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ತಾಲೂಕ ಘಟಕಕ್ಕೆ ನೂತನ ಅಧ್ಯಕ್ಷ ಸೇರಿದಂತೆ ಈ ಕೆಳಗಿನ ವಿವಿಧ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು. ಮಾನವಿ ತಾಲೂಕಿನ ನೂತನ ಅಧ್ಯಕ್ಷರಾಗಿ ಜಮೀರ್ ಇಸ್ಮಾಯಿಲ್, ಉಪಾಧ್ಯಕ್ಷರಾಗಿ ಸೈಯದ್ ಸಲೀಂ ಪಾಷ, ತಾಲೂಕ ಪ್ರಧಾನ ಕಾರ್ಯದರ್ಶಿ ಅಜ್ಜಿರ ಪಾಷ ಇವರನ್ನು



ನೇಮಕಗೊಳಿಸಿ. ತಕ್ಷಣ ಬ್ರಿಗಡ್ನ ತತ್ವ ಸಿದ್ಧಾಂತ ಮತ್ತು ಮೌಲಾನ ಅಬುಲ್ ಕಲಾಂ ಆಜಾದ್ ಅವರ ತತ್ವ ಸದ್ಧಾಂತಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗುವಂತೆ ಸೂಚಿಸಿ ಆದೇಶ ಪತ್ರಗಳನ್ನು ಜಿಲ್ಲಾ ಅಧ್ಯಕ್ಷ ಸೈಯದ್ ಹುಸೇನ್ ಸಾಹೇಬ್ ಅವರು ವಿತರಿಸಿ ಅಭಿನಂದಿಸಿದರು.

# ಅನ್ನ ಅಕ್ಷರ ದಾಸೋಹ ಮಾಡುವುದು ಮಹಾ ಪುಣ್ಯ : ಸಚಿವ ಶರಣಬಸಪ್ಪ ದರ್ಶಾನಾಪೂರು

ಯುವಮಾರ್ಗ ಸುದ್ದಿ

**ಲಿಂಗಸುಗೂರು,ಜ.3–**ಅನ್ನದಾಸೋಹ, ವಿಧ್ಯಾ ದಾಸೋಹ ಮಾಡುವುದು ಪುಣ್ಯದ ಕಾಯಕ ಎಂದು ಸಣ್ಣ ಕೈಗಾರಿಕಾ ಸಚಿವ ಶರಣಬಸಪ್ಪ ದರ್ಶನಾಪುರು ಅಭಿಪ್ರಾಯಪಟ್ಟರು.

ಪಟ್ಟಣದ ಬಸವೇಶ್ವದ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಪೂರ್ವ ಮಹಾವಿದ್ಯಾಲಯದ ಬೆಳ್ಳಿ ಸಂಭ್ರಮ ಉದ್ಘಾಟಿಸಿ ಹಾಗೂ ಸರ್ದಾರ ವಲ್ಲಭಭಾಯಿ ಪಟೇಲ್ ಬಾಲಕರ ವಸತಿ ನಿಲಯ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಶಿಕ್ಷಣ ಸಂಸ್ಥೆಯನ್ನು ಕಟ್ಟಿ ಬೆಳೆಸುವುದು ಸಣ್ಣ ಕೆಲಸವಲ್ಲ. ಮಠಮಾನ್ಯಗಳು ಹಾಗೂ ಸಂಘ ಸಂಸ್ಥೆಗಳಿಂದ ಬಡ ಮಕ್ಕಳು ವಿದ್ಯಾಭ್ಯಾಸ ಮಾಡಲು ಸಾಧ್ಯವಾಗಿದೆ. ಅಲ್ಲದೇ ದಕ್ಷಿಣ ಕರ್ನಾಟಕದ ವಿದ್ಯಾರ್ಥಿಗಳ ಜೊತೆ ಸ್ಪರ್ಧೆ ಮಾಡುವ ಶಕ್ತಿ ಈ ಭಾಗದ ವಿದ್ಯಾರ್ಥಿಗಳಲ್ಲಿದೆ. 3500 ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆಂದರೆ ಸಂಸ್ಥೆ ನೀಡುವ ಗುಣಮಟ್ಟದ ಶಿಕ್ಷಣದಿಂದಾಗಿದೆ ಎಂದರು. ಶಾಸಕ ಮಾನಪ್ಪ ವಜ್ಜಲ್ ಮಾತನಾಡಿ, ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಶ್ರಮಿಸುವ ಕೆಲಸ ನಮ್ಮ ಭಾಗದ ಜನಪ್ರತಿನಿಧಿಗಳು ಶ್ರಮಿಸಬೇಕು. ದೊಡ್ಡ ಕೈಗಾರಿಕೆಗಳನ್ನು ಕಲ್ಯಾಣ ಕರ್ನಾಟಕದಲ್ಲಿ ಸ್ಥಾಪಿಸಿ ಯುವಕರಿಗೆ ಉದ್ಯೋಗ ಕೊಡುವಂತಹ ಕೆಲಸ ಮಾಡಬೇಕೆಂದರು.



ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಅಮರೇಗೌಡ ಪಾಟೀಲ್ ಬಯ್ಯಾಪುರ, ಹಂಪಿ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಡಾ.ಡಿ.ವಿ.ಪರಮಶಿವಮೂರ್ತಿ, ವಿಧಾನ ಪರಿಷತ ಸದಸ್ಯರುಗಳಾದ ಶರಣಗೌಡ ಪಾಟೀಲ್ ಬಯ್ಯಾಪುರ, ಶಶಿಲ್ ಜಿ.ನಮೋಶಿ, ಭೂಪನಗೌಡ ಕರಡಕಲ್, ಬಸವಂತರಾಯ ಕುರಿ, ಬಸವರಾಜ ಮೇಟಿ ಸೇರಿ ಗಣ್ಯರು ಶಿಕ್ಷಕರು ವಿದ್ಯಾರ್ಥಿಗಳು ಸೇರಿ ಇತರರು ಇದ್ದರು.

# ಸಾವಿತ್ರಿ ಬಾಯಿ ಪುಲೆ ಯವರ ಜನ್ಮದಿನಾಚರಣೆ

ಯುವಮಾರ್ಗ ಸುದ್ದಿ

**ಮಾನ್ವಿ,ಜ.3–** ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಸಾವಿತ್ರಿ ಬಾಯಿ ಪುಲೆ ಯವರ ಜನ್ಮದಿನಾಚರಣೆಯನ್ನು ಆಚರಿಸಲಾಯಿತು.



ಸಾವಿತ್ರಿ ಬಾಯಿಪುಲೆ ಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಕಾಲೇಜಿನ ಪ್ರಾಚಾರ್ಯರಾದ ಡಾ. ಜೆ. ಎಲ್. ಈರಣ್ಣ ಮಾತನಾಡಿ ಸಾವಿತ್ರಿ ಬಾಯಿಪುಲೆಯವರು 1848ರಲ್ಲಿ ಬಾಲಕಿಯರ ಮೊದಲ ಶಾಲೆಯನ್ನು ಸ್ಥಾಪಿಸಿ ಭಾರತದ ಮೊದಲ ಮಹಿಳಾ ಶಿಕ್ಷಕಿ,ಸಮಾಜ ಸುಧಾರಕಿ, ಕವಯತ್ರಿ, ಶಿಕ್ಷಣ ತಜ್ಞೆಯಾಗಿದ್ದರು. ಹಾಗೂ ಅಂದಿನ ದಿನಗಳಲ್ಲಿ ಮಹಿಳೆಯರಿಗೆ ಶಿಕ್ಷಣ ಪಡೆಯುವ ಅವಕಾಶ ಇಲ್ಲದೆ ಇರುವ ಸಮಯದಲ್ಲಿ ಮಹಿಳೆಯರ ಶಿಕ್ಷಣಕ್ಕಾಗಿ ಶ್ರಮಿಸುವ ಮೂಲಕ ಮಹಿಳೆಯರ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವನ್ನು ವಹಿಸಿ ಅಕ್ಷರದ ಅವ್ವ ಎನ್ನಿಸಿಕೊಂಡರು ಜೋತೆಗೆ ಸಾಮಾಜಿಕ ಅನಿಷ್ಟಗಳಾದ ಬಾಲ್ಯ ವಿವಾಹ ,ಜಾತಿ ಪದ್ಧತಿ, ಸತಿ ಪದ್ಧತಿ ,ವಿಧವೆಯರ ಕೇಶ ಮುಂಡನ ಇನ್ನಿತರ ಪದ್ಧತಿಗಳ ವಿರುದ್ಧ ಹೋರಾಟ ನಡೆಸಿದರು. ಅವರ ಆದರ್ಶಮಯ ಜೀವನ ನಮ್ಮೆಲ್ಲರಿಗೂ ಮಾದರಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಕಚೇರಿ ಅಧಿಕ್ಷಕರಾದ ರಂಗನಾಥ್ ಅತ್ತನೂರು, ಉಪನ್ಯಾಸಕರಾದ ಡಾ. ಬಸವರಾಜ ಕರಡಿಗುಡ್ಡ , ಭೀಮಸಿಂಗ್, ಸುರೇಶ್ ಹರನಹಳ್ಳಿ, ರಂಗಣ್ಣ, ಮರಿಯಮ್ಮ ಮತ್ತು ರೇಣುಕಾ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಸಾವಿತ್ರಿಬಾಯಿ ಪುಲೆ ಜನ್ಮದಿನಾಚರಣೆ ಅಂಗವಾಗಿ 'ಎನ್ ಎಸ್ ಎಸ್ ಕಪ್' ಕ್ರೀಡಾಕೂಟಕ್ಕೆ ಚಾಲನೆ

ಯುವಮಾರ್ಗ ಸುದ್ದಿ

**ಮಾನ್ವಿ,ಜ.3–** ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ಎನ್.ಎಸ್.ಎಸ್ ಘಟಕದ ವತಿಯಿಂದ ಅಕ್ಷರದ ಅವ್ವ ಮಾತೆ ಸಾವಿತ್ರಿಬಾಯಿ ಪುಲೆ ಅವರ ಜನ್ಮ ದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ 'NSS Cup' ಪಂದ್ಯಾವಳಿಯನ್ನು ಸಂಸ್ಥೆಯ ಉಪಪ್ರಾಂಶುಪಾಲರಾದ ಸುಧಾಕರ ಸಂಜೀವ್ ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿನಿಯರು ತಮ್ಮ ಜೀವನದಲ್ಲಿ ಮಾತೆ ಸಾವಿತ್ರಿಬಾಯಿ ಪುಲೆ ಅವರ ಆದರ್ಶಗಳು ಹಾಗೂ ಅವರ ಹೋರಾಟದ ಬದುಕನ್ನು ಅಳವಡಿಸಿಕೊಂಡು ಉತ್ತಮ ಸಾಧನೆ ಮಾಡಬೇಕು ಎಂದು ಕಿವಿಮಾತು ಹೇಳಿದರು. ಅಲ್ಲದೆ, ಘಟಕದಿಂದ ಹಮ್ಮಿಕೊಂಡಿರುವ ವಾರ್ಷಿಕ ಕ್ರೀಡಾ ಚಟುವಟಿಕೆಗಳಲ್ಲಿ ಎಲ್ಲಾ ವಿದ್ಯಾರ್ಥಿನಿಯರು ಕ್ರೀಡಾ ಮನೋಭಾವದಿಂದ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ಪ್ರೋತ್ಸಾಹಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಭಾಷಣ ಮಾಡಿದ ಮಂಜುಳಾ ಹಿರೇಮಠ್, ಸಾವಿತ್ರಿಬಾಯಿ ಪುಲೆ ಅವರ ಜೀವನ ಚರಿತ್ರೆ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಅವರು ಮಾಡಿದ ಸಾಧನೆಗಳ ಬಗ್ಗೆ ವಿದ್ಯಾರ್ಥಿನಿಯರಿಗೆ ಸಂಪೂರ್ಣವಾಗಿ ಮಾಹಿತಿ ನೀಡಿದರು.


ಈ ಸಂದರ್ಭದಲ್ಲಿ ಶಿಕ್ಷಕರಾದ ಬಂಡೆಮ್ಮ, ಅಶೋಕ್ ಕುಮಾರ್ ಮಳ್ಳಿ,ಮಂಜುಳಾ ಹಿರೇಮಠ, ರಜನಿ, ಶೇಖ್ ಹುಸೇನ್, ಚನ್ನಬಸವರಾಜ, ಪ್ರಮೋದ ಕುಮಾರ, ಶ್ರೀಮತಿ ಕಟ್ಟಿ, ನುಜಹತ್ ಫಾತಿಮಾ, ಅನ್ವರ್ ಹುಸೇನ್, ಜಯಭೀಮ ಭಾವಿಕಟ್ಟಿ, ಈರಾಮಣಿ,ಶರತ್ ಕುಮಾರ್, ರಾಜಶೇಖರ. ಎಚ್, ರೇಣುಕಾ ಇದ್ದರು.

ಎಸ್ಎಸ್ಎಲ್ಸಿಫಲಿತಾಂಶ ಸುಧಾರಣೆಗಾಗಿ ವಿಜ್ಞಾನ ಶಿಕ್ಷಕರಿಗೆ ತರಬೇತಿ ಕಾರ್ಯಾಗಾರ:

# ವಿಜ್ಞಾನ ಕಲಿಕೆಗೆ ಮಕ್ಕಳಲ್ಲಿ ಉತ್ತೇಜನ ಅಗತ್ಯ : ಚಂದ್ರಶೇಖರ ದೊಡ್ಡಮನಿ

ಯುವಮಾರ್ಗ ಸುದ್ದಿ

**ಮಾನ್ವಿ,ಜ.3–** ಎಸ್ಎಸ್ಎಲ್ಸಿ ಫಲಿತಾಂಶ ಸಾಧನೆಗಾಗಿ ವಿಜ್ಞಾನ ವಿಷಯ ಶಿಕ್ಷಕರು ವಿಶೇಷ ಕಲಿಕಾ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಆಸಕ್ತಿ ಮೂಡಿಸುವದು ಅಗತ್ಯವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ ಹೇಳಿದರು.




ಪಟ್ಟಣದ ಬಾಲಕರ ಸರ್ಕಾರಿ ಪ್ರೌಢಶಾಲೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ಬೆಂಗಳೂರು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ರಾಯಚೂರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮಾನವಿ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಎಸ್ಎಸ್ಎಲ್ಸಿ ಫಲಿತಾಂಶ ಸುಧಾರಣೆಗಾಗಿ ವಿಜ್ಞಾನ ವಿಷಯ ಶಿಕ್ಷಕರ ಒಂದು ದಿನದ ಕಾರ್ಯಾಗಾರವನ್ನು ಸಸಿಗೆ ನೀರು ಎರೆದು ಉದ್ಘಾಟಿಸಿ ಮಾತನಾಡಿದ ಅವರು, ವಿಜ್ಞಾನ ಸದಾ ಕೌತುಕ, ಹೊಸತನದಿಂದ ಕೂಡಿದ್ದರಿಂದ ವಿದ್ಯಾರ್ಥಿಗಳಲ್ಲಿ ವಿಜ್ಞಾನ ವಿಷಯದ ಕುರಿತಾದ ಹಚ್ಚಿನ ಅಭ್ಯಾಸ, ಜ್ಞಾನ ಅಗತ್ಯವಿದ್ದು, ಈ ನಿಟ್ಟಿನಲ್ಲಿ ವಿಜ್ಞಾನ ವಿಷಯ ಶಿಕ್ಷಕರು ಮಕ್ಕಳಲ್ಲಿ ವಿಜ್ಞಾನ ವಿಷಯ ಕುರಿತು ಆಸಕ್ತಿ ಹುಟ್ಟಿಸುವ ಮೂಲಕ ವಿಶೇಷ ಮಾದರಿ ಪ್ರಯೋಗ ಚಟುವಟಿಕೆಗಳನ್ನು ಶಾಲೆಗಳಲ್ಲಿ ಮಾಡುವದು ಅಗತ್ಯವಾಗಿದೆ. ಅ ಮೂಲಕ ವಿದ್ಯಾರ್ಥಿಗಳಲ್ಲಿ ವಿಜ್ಞಾನ ವಿಷಯ ಕುರಿತು ಕುತೂಹಲ ಹೆಚ್ಚಾಗಿ ನಿರಂತರ ಅಭ್ಯಾಸದಲ್ಲಿ ತೊಡಿಕೊಂಡಾಗ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳಿಸಲು ಸಾಧ್ಯವಿದೆ ಎಂದರು.

ಈ ಬಾರಿಯಎಸ್ಎಸ್ಎಲ್ಸಿಫಲಿತಾಂಶ ಸುಧಾರಣೆಯ ದೃಷ್ಟಿಯಿಂದ

ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಮಾನ್ವಿ ತಾಲೂಕಿಗೆ ವಿಶೇಷ ಆದ್ಯತೆಯನ್ನು ನೀಡಿ ಈ ಬಾರಿ ವಿಜ್ಞಾನ ವಿಷಯಕ್ಕೆ ಸಂಬಂಧಿಸಿದ ಮಕ್ಕಳ ಕಲಿಕೆಗೆ ಉಪಯುಕ್ತವಾದ ಶಾಲೆಗಳಲ್ಲಿ ವಿಜ್ಞಾನ ವಸ್ತುಗಳ ಪ್ರದರ್ಶನ ಮತ್ತು ಎಸ್ಎಸ್ಎಲ್ಸಿ ಫಲಿತಾಂಶ ಸುಧಾರಣೆಗಾಗಿ ವಿಜ್ಞಾನ ವಿಷಯ ಶಿಕ್ಷಕರಿಗೆ ತರಬೇತಿ ಕಾರ್ಯಾಗಾರ ಹಾಗೂ ದೈಹಿಕ ಶಿಕ್ಷಕರಿಗೆ ಪ್ರಥಮ ಚಿಕಿತ್ಸೆ ಕುರಿತು ಕಾರ್ಯಾಗಾರದಂತಹ ಮಹತ್ವದ ಕಾರ್ಯಕ್ರಮಗಳನ್ನು ನೀಡಿರುವದು ಶ್ಲಾಘನೀಯವಾಗಿದೆ. ಈ ಬಾರಿಯ ಎಸ್ಎಸ್ಎಲ್ಸಿ ಫಲಿತಾಂಶ ಹೆಚ್ಚಳಕ್ಕೆ ಪ್ರತಿಯೊಬ್ಬ ಶಿಕ್ಷಕರು ವಿಷಯವಾರು ಹೆಚ್ಚಿನಕಾಳಜಿ ವಹಿಸಬೇಕಿದೆ. ವೈಯಕ್ತಿಕ ವಿಚಾರ ಕಾರ್ಯಗಳನ್ನು ಬದಿಗಟ್ಟು ಮಕ್ಕಳ ಫಲಿತಾಂಶ ಸಾಧನೆಗೆ ಆದ್ಯತೆ ನೀಡಬೇಕು. ಸಿ ಮತ್ತು ಸಿ+ ವಿದ್ಯಾರ್ಥಿಗಳಿಗೆ 40+ ವಿಜನ್ ಅನುಷ್ಠಾನಕ್ಕೆ ತಂದು ಎಲ್ಲಾ ವಿದ್ಯಾರ್ಥಿಗಳ ಉತ್ತೀರ್ಣಕ್ಕಾಗಿ ಶ್ರಮಿಸಬೇಕಿದೆ. ಎಲ್ಲಾ ವಿಷಯ ಶಿಕ್ಷಕರ ಕುರಿತಾಗಿ ಶಾಲೆ ಮುಖ್ಯ ಶಿಕ್ಷಕರು ನಿಗಾ ವಹಿಸಿ ಫಲಿತಾಂಶ ಹೆಚ್ಚಕ್ಕೆ ಸೂಕ್ತ ಮಾರ್ಗದರ್ಶನ ನೀಡಬೇಕು. ಪೂರ್ವಸಿದ್ಧತಾ ಪರೀಕ್ಷೆ ತಯಾರಿ ಸೇರಿದಂತೆ ಎಫ್ಎ ಪರೀಕ್ಷೆಗಳ ಫಲಿತಾಂಶ ಮಾಹಿತಿಗಳನ್ನು ಸಮಯಕ್ಕೆ ಸರಿಯಾಗಿ ಇಲಾಖೆಗೆ ನೀಡುವಂತೆ ಸೂಚಿಸಿದರು.

ನಂತರ ತರಬೇತಿ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಕನ್ಯಾಶಾಲೆಯ ಸಹ ಶಿಕ್ಷಕಿ ರೇಖಾ, ಮದ್ಲಾಪೂರು ಸಹ ಶಿಕ್ಷಕ ಸಂದೀಪ, ಅತ್ತನೂರು ಶಾಲೆ ಸಹ ಶಿಕ್ಷಕಿ ಉಮಾ, ಮಧು ವಿಜ್ಞಾನ ವಿಷಯ ಕುರಿತು ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಎಸ್ಎಸ್ಎಲ್ಸಿಫಲಿತಾಂಶ ತಾಲೂಕ ನೋಡಲ್ ಅಧಿಕಾರಿ ಹನುಮೇಶ ನಾಯಕ, ಇಸಿಓ ಗಳಾದ ಮಹೇಶ, ಸಂತೋಷ,ತರಬೇತಿ ನೋಡಲ್ ಅಧಿಕಾರಿ ಸಿದ್ಧಲಿಂಗೇಶ್ವರ ಸೇರಿದಂತೆ ವಿಜ್ಞಾನ ವಿಷಯ ಶಿಕ್ಷಕರು ಉಪಸ್ಥಿತರಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H